ಭಾನುವಾರ,04.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 110
Digital Varthe Kannada Daily
Volume 01 - Issue 110
Sunday 04.01.2026
Price: 5/- Rs
2 Pages Bangalore


PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಕಂಬಳ ಕೋಣಗಳ ಮಾಲೀಕನ ಮೇಲೆ ಹಲ್ಲೆಗೆ ಯತ್ನ





**ಮಂಗಳೂರು:** ಮುಲ್ಕಿ ತಾಲೂಕಿನ ಅಂಗಾರಗುಡ್ಡೆ ಗ್ರಾಮದಲ್ಲಿ ಕಂಬಳ ಸ್ಪರ್ಧೆಯಲ್ಲಿ ಬಹುಮಾನ ಗೆದ್ದ ಕೋಣದ ಮಾಲಕರನ್ನು ಗುರಿಯಾಗಿಸಿಕೊಂಡು ಹಣಕ್ಕಾಗಿ ಪೀಡಿಸಿ ನಡೆಸಿ ಹಲ್ಲೆಗೆ ಯತ್ನಿಸಿದ ಘಟನೆ ಬೆಳಕಿಗೆ ಬಂದಿದೆ. ಮುಲ್ಕಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ ಅಂಗಾರಗುಡ್ಡೆ ಕೆಂಚನಕೆರೆ ನಿವಾಸಿ ಶಂಸುದ್ದೀನ್ ಎಂಬವರು ಕೋಣದ ಮಾಲೀಕ. ಶಂಸುದ್ದೀನ್ ಮುಂ ಬೈನಲ್ಲಿ ನೆಲೆಸಿರುವ ಉದ್ಯಮಿಯೊಬ್ಬರಿಗೆ ಸೇರಿದ ಗದ್ದೆ, ತೋಟ, ಜಾಗ ಹಾಗೂ ಮನೆಯನ್ನು ನೋಡಿಕೊಳ್ಳುತ್ತಿದ್ದರು. ಇತ್ತೀಚೆಗೆ ಮುಲ್ಕಿಯಲ್ಲಿ ನಡೆದ ಅರಸು ಕಂಬಳ ಸ್ಪರ್ಧೆಯಲ್ಲಿ ಶಂಸುದ್ದೀನ್ ತಂದಿದ್ದ ಕೋಣಗಳು ಉತ್ತಮ ಪ್ರದರ್ಶನ ನೀಡಿ ಬಹುಮಾನ ಗೆದ್ದಿದ್ದವು. ಈ ಬಹುಮಾನದಲ್ಲಿ ಬಂಗಾರದ ಸರ ಮತ್ತು ನಗದು ಸೇರಿತ್ತು. ಈ ವಿಚಾರ ತಿಳಿದ ಶ್ಯಾಮಸುಂದರ್ ಶೆಟ್ಟಿ, ಅಕ್ಷಯ್ ಪೂಜಾರಿ ಮತ್ತು ಸುವೀನ್ ಕಾಂಚನ್ ಎಂಬ ಮೂವರು ಆರೋಪಿಗಳು ಶಂಸುದ್ದೀನ್ ಅ ವರನ್ನು ಗುರಿಯಾಗಿಸಿಕೊಂಡಿದ್ದಾರೆ. "ನಿನಗೆ ಬಹುಮಾನ ಸಿಕ್ಕಿದೆ, ಹಣ ಮತ್ತು ಬಂಗಾರದ ಸರವನ್ನು ನಮಗೆ ಕೊಡಬೇಕು. ಇಲ್ಲದಿದ್ದರೆ ದನಗಳನ್ನು ಕಡಿಯಲು ಕೊಡುತ್ತೀಯಲ್ಲವಾ?" ಎಂದು ಬೆದರಿಕೆ ಹಾಕಿ ಹಫ್ತಾ ಕೇಳಿದ್ದಾರೆ ಘಟನೆ ನಡೆದ ದಿನ ಆರೋಪಿಗಳು ಶಂಸುದ್ದೀನ್ ಅವರ ಮನೆಗೆ ನುಗ್ಗಿದ್ದಾರೆ. ಮನೆ ಒಳಗೆ ಪ್ರವೇಶಿಸಿ ಹಣ ನೀಡುವಂತೆ ಒತ್ತಡ ಹೇರಿದ್ದು, ನಿರಾಕರಿಸಿದಾಗ ಹಲ್ಲೆಗೆ ಮುಂದಾಗಿದ್ದಾರೆ. ಈ ವೇಳೆ ಆರೋಪಿಗಳು ಶಬ್ದ ಮಾಡುತ್ತಿದ್ದರಿಂದ ಸ್ಥಳೀಯ ನಿವಾಸಿಗಳು ಸ್ಥಳಕ್ಕೆ ಧಾವಿಸಿದ್ದಾರೆ. ಸ್ಥಳೀಯರ ಸಹಾಯದಿಂದ ಶಂಸುದ್ದೀನ್ ಪ್ರಾಣಾಪಾಯದಿಂದ ಪಾರಾಗಿದ್ದು, ಆರೋಪಿಗಳು ಸ್ಥಳದಿಂದ ಪರಾರಿಯಾಗಿದ್ದಾರೆ.

ಈ ಘಟನೆ ಕುರಿತು ಶಂಸುದ್ದೀನ್ ಅವರು ಮುಲ್ಕಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ದೂರಿನ ಆಧಾರದಲ್ಲಿ ಪ್ರಕರಣ ದಾಖಲಿಸಿಕೊಂಡ ಮುಲ್ಕಿ ಪೊಲೀಸರು ತನಿಖೆಗೆ ಮುಂದಾಗಿದ್ದಾರೆ. ಸಾಕ್ಷ್ಯಾಧಾರಗಳು ಹಾಗೂ ಸ್ಥಳೀಯರ ಹೇಳಿಕೆಗಳನ್ನು ಸಂಗ್ರಹಿಸಿದ ಪೊಲೀಸರು ಆರೋಪಿಗಳನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ. ತನಿಖೆ ಪೂರ್ಣಗೊಳಿಸಿದ ನಂತರ ಶ್ಯಾಮಸುಂದರ್ ಶೆಟ್ಟಿ, ಅಕ್ಷಯ್ ಪೂಜಾರಿ ಮತ್ತು ಸುವೀನ್ ಕಾಂಚನ್ ಎಂಬ ಮೂವರು ಬಂಧಿಸಲಾಗಿದೆ. ಆರೋಪಿಗಳ ವಿರುದ್ಧ ಹಣಕ್ಕಾಗಿ ಪೀಡನೆ, ಮನೆಗೆ ನುಗ್ಗಿ ಬೆದರಿಕೆ ಹಾಕಿದ ಆರೋಪ ಸೇರಿದಂತೆ ವಿವಿಧ ಕಲಂಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಪತ್ನಿ ಕೊಲೆಗೆ ಪತಿಯ ಪೂರ್ವ ಯೋಜನೆ; 15 ದಿನ ಗನ್ ತರಬೇತಿ



**ಬೆಂಗಳೂರು:** ಹೆಂಡತಿ ಡೈವೋರ್ಸ್ ನೀಡದೆ ಅಕ್ರಮ ಸಂ ಬಂಧ ಹೊಂದಿದ್ದಾಳೆ ಎಂದು ಆರೋಪಿಸಿ ಪತ್ನಿ ಭುವನೇಶ್ವರಿಯನ್ನು ಗುಂಡಿಕ್ಕಿ ಕೊಲೆ ಮಾಡಿದ್ದ ಪತಿ ಬಾಲಮುರುಗನ್‌ನ ನಟೋರಿಯಸ್ ಮನಸ್ಥಿತಿ ಪೊಲೀಸರ ವಿಚಾರಣೆಯಲ್ಲಿ ಒಂದೊಂದೆ ಬೆಳಕಿಗೆ ಬರುತ್ತಿದೆ. ರಂದು ಮಾಗಡಿ ರಸ್ತೆ, ವೆಸ್ಟ್ ಆಫ್ ಕಾರ್ಡ್ ರಸ್ತೆಯಲ್ಲಿ ನಡೆದಿದ್ದ ಭೀಕರ ಕೊಲೆಯ ಹಿಂದೆ ಪತಿಯ ಪೂರ್ವಯೋಜಿತ ಮತ್ತು ಕ್ರಿಮಿನಲ್ ಮೈಂಡ್ ಪೊಲೀಸರನ್ನೇ ಹುಬ್ಬೇರುವಂತೆ ಮಾಡಿದೆ. ಪತ್ನಿ ಭುವನೇಶ್ವರಿಯನ್ನು ಕೊಲ್ಲುವ ನಿರ್ಧಾರಕ್ಕೆ ಬಂದಿದ್ದ ಪತಿ ಬಾಲಮುರುಗನ್ ಮಾಡಬಾರದ ಕಸರತ್ತುಗಳನ್ನು ಮಾಡಿ, ವಿಫಲವಾದರೂ ಛಲ ಬಿಡದೆ ಕೊನೆಗೆ ತನ್ನ ಪತ್ನಿಯನ್ನೇ ಮುಗಿಸಿದ್ದಾನೆ. ಕೊಲೆ ಮಾಡುವ ಉದ್ದೇಶದಿಂದಲೇ ಗನ್ ಖರೀದಿಸಲು ಮುಂದಾಗಿ ಮೂರು ಬಾರಿ ಬಿಹಾರಕ್ಕೆ ಪ್ರಯಾಣಿಸಿದ್ದ.

ಮೊದಲ ಎರಡು ಬಾರಿ ಹಣ ಕಳೆದುಕೊಂಡು ಗನ್ ಸಿಗದೆ ಮೋಸ ಹೋಗಿ ವಾಪಸ್ಸಾಗಿದ್ದ. ಆದರೆ, ಮೂರನೇ ಬಾರಿ ಮತ್ತೆ ಬಿಹಾರಕ್ಕೆ ತೆರಳಿ, ಗನ್ ತೋರಿಸಿದ ಬಳಿಕವೇ ಹಣ ನೀಡಿ ಎರಡು ಪಿಸ್ತೂಲ್‌ಗಳನ್ನು ಖರೀದಿಸಿ ತಂದಿದ್ದ. ಅಷ್ಟೇ ಅಲ್ಲದೆ, ಬಿಹಾರದಲ್ಲೇ 15 ದಿನಗಳ ಕಾಲ ಪಿಸ್ತೂಲ್ ಬಳಸುವ ತರಬೇತಿಯನ್ನೂ ಪಡೆದಿದ್ದ ಎಂಬ ಆಘಾತಕಾರಿ ಮಾಹಿತಿ ತನಿಖೆಯಿಂದ ಬಯಲಾಗಿದೆ. ಒಂದು ಗನ್ ಅನ್ನು ತಮಿಳುನಾಡಿನ ವ್ಯಕ್ತಿಯೊಬ್ಬನಿಗೆ ನೀಡಿ ಪತ್ನಿ ಕೊಲೆಗೆ ಸುಪಾರಿ ನೀಡಿದ್ದ. 1.25 ಲಕ್ಷ ರೂ. ಹಣ ಪಡೆದ ಸುಪಾರಿ ಕಿಲ್ಲರ್ ಬೆಂಗಳೂರಿನ ಲಾಡ್ಜ್ ನಲ್ಲಿ ಉಳಿದುಕೊಂಡು, ಭುವನೇಶ್ವರಿಯನ್ನ ವಾಚ್ ಮಾಡಿ ಕೊನೆಗೆ ಕೊಲೆ ಮಾಡದೆ ವಾಪಸ್ಸಾಗಿದ್ದ. ಈ ವೇಳೆ ಬಾಲಮುರುಗನ್ 'ನಾನು ಹಿಂದೆ ಇರ್ತೀನಿ ಬಾ' ಎಂದು ಸುಪಾರಿ ಕಿಲ್ಲರ್‌ನ ಕರೆದೊಯ್ದರೂ ಗುಂಡು ಹಾರಿಸದೆ ವಾಪಸ್ಸಾಗಿದ್ದ. ಸುಪಾರಿ ಕಿಲ್ಲರ್‌ನಿಂದ ಕೆಲಸ ಆಗದಿದ್ದಾಗ, ಬಾಲಮುರುಗನ್ ತಾನೇ ಅಖಾಡಕ್ಕೆ ಇಳಿದಿದ್ದ.

ಸ್ವತಃ ಎರಡು ಬಾರಿ ಕೊಲೆಗೆ ಯತ್ನಿಸಿದ್ದರೂ, ಧೈರ್ಯ ಸಾಲದೆ ಹಿಂದಕ್ಕೆ ಸರಿದಿದ್ದ. ಆದರೆ, ತನ್ನ ಪತ್ನಿಯನ್ನು ಕೊಲ್ಲಲೇಬೇಕೆಂದು ಧೈರ್ಯ ಮಾಡಿ ಭುವನೇಶ್ವರಿಯನ್ನು ಗುಂಡಿಕ್ಕಿ ಕೊಲೆ ಮಾಡಿದ್ದ. ಸದ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಗನ್ ನೀಡಿದವರು ಹಾಗೂ ಸುಪಾರಿ ಪಡೆದವನ ಪತ್ತೆಗೆ ಮಾಗಡಿ ರಸ್ತೆ ಪೊಲೀಸರು ತೀವ್ರ ಕಾರ್ಯಾಚರಣೆ ನಡೆಸುತ್ತಿದ್ದಾರೆ.

## ಜನವರಿ 5ಕ್ಕೆ ಬಂದ್ ನೇಕಾರರ ರಕ್ಷಣೆಗೆ ಬೆಂಬಲಿಸುವಂತೆ ಮುಖಂಡರ ಮನವಿ



**ದೊಡ್ಡಬಳ್ಳಾಪುರ** : ಜನವರಿ 5ರ ಸೋಮವಾರದಂದು ಬೆಳಿಗ್ಗೆ 6 ಸಂಜೆ 6 ಗಂಟೆವರೆಗೆ ಸ್ವಯಂಪ್ರೇರಿತ ಬಂದ್ ಗೆ ಕರೆ ನೀಡಲಾಗಿದ್ದು ನೇಕಾರರರನ್ನು ಉಳಿಸುವ ನಿಟ್ಟಿನಲ್ಲಿ ನೇಕಾರರನ್ನು ಬೆಂಬಲಿಸಿ ಎಲ್ಲರು ಬಂದ್ ನಲ್ಲಿ ಭಾಗವಹಿಸಬೇಕೆಂದು ನೇಕಾರ ಹೋರಾಟ ಸಮಿತಿ ಮುಖಂಡ ಪಿ ಎ ವೆಂಕಟೇಶ್ ಮನವಿ ಮಾಡಿದರು.

ನಗರದ ಖಾಸಗಿ ಕಲ್ಯಾಣ ಮಂಟಪದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಕರ್ನಾಟಕ ರಾಜ್ಯ ನೇಕಾರರ ಹಿತರಕ್ಷಣಾ ಸಮಿತಿ (ರಿ.)ದೊಡ್ಡಬಳ್ಳಾಪುರ ಟೆಕ್ಸ್‌ಟೈಲ್ ವೀವರ್ಸ್ ಅಸೋಸಿಯೇಷನ್, ನೇಕರರ ಹೋರಾಟ ಸಮಿತಿ, ಕೂಲಿ ನೇಕಾರರ ಹಿತರಕ್ಷಣಾ ಸಮಿತಿ, ದೊಡ್ಡಬಳ್ಳಾಪುರ ಎಲ್ಲಾ ನೇಕಾರ ಸಂಘಟನೆಗಳು ಮತ್ತು ಸಹಕಾರಿ ಸಂಘಗಳ ಸಹಕಾರದೊಂದಿಗೆ ಜನವರಿ 5ರಂದು ಬಂದ್ ಕರೆ ನೀಡಲಾಗಿದೆ. ನೇಕಾರಿಕೆ ದೊಡ್ಡಬಳ್ಳಾಪುರದ ಜೀವನಾಡಿ ಗುಡಿ ಕೈಗಾರಿಕೆಯಾಗಿದ್ದು, ಇಂದು ನೇಕಾರರು ಅಳಿವಿನ ಅಂಚಿನಲ್ಲಿದ್ದೇವೆ ಲಾಳಿ ಸಹಿತ ವಿದ್ಯುತ್ ಮಗ್ಗಗಳ ಸೀರೆಗಳನ್ನು ಮಾರಾಟ ಮಾಡಲು ಹರಸಾಹಸ ಪಡುವ ಪರಿಸ್ಥಿತಿ ಎದುರಾಗಿದೆ. ಇದಕ್ಕೆ ಮುಖ್ಯ ಕಾರಣ ಸೂರತ್ ನ ರಿಪೀಯರ್ ಮಗ್ಗದ ಸೀರೆಗಳು ಇದಕ್ಕೆ ಕಡಿವಾಣ ಹಾಕುವ ಹಾಗೂ ನೇಕಾರರ ಪರಿಸ್ಥಿತಿಯನ್ನು ಸರಕಾರಕ್ಕೆ ಮುಟ್ಟಿಸುವ ನಿಟ್ಟಿನಲ್ಲಿ ಈ ಬಂದ್ ಕರೆಯಲಾಗಿದೆ ಎಂದರು.

ಪ್ರಮುಖ ಒತ್ತಾಯಗಳೇನು....????

* ದೊಡ್ಡಬಳ್ಳಾಪುರದ ಜೀವನಾಡಿ ಗುಡಿ ಕೈಗಾರಿಕೆ ನೇಯ್ದೆ ಉದ್ಯಮ ಉಳಿಸಲು
*ಲಾಳಿ ಸಹಿತ ವಿದ್ಯುತ್ ಮಗ್ಗಗಳ ಮೀಸಲಾತಿ (ರಿಸರ್ವೇಶನ್) ಅಧಿನಿಯಮ ರೂಪಿಸಲು
*ನೇಯ್ದಿ ಉದ್ಯಮವನ್ನು ನಂಬಿರುವ ಲಕ್ಷಾಂತರ ಜನರ ಬದುಕನ್ನು ಉಳಿಸಲು ಸರ್ಕಾರ ತಕ್ಕಣ ಸೀರೆ ಖರೀದಿಸಲು ಒತ್ತಾಯಿಸಿ ಲಾಳಿ ರಹಿತ ಆಧುನಿಕ ಮಗ್ಗಗಳಲ್ಲಿ ಉತ್ಪಾದಿಸಿದ ಸೂರತ್ ಮತ್ತು ಬೆಳಗಾವಿ ಸೀರೆಗಳನ್ನು ನಿಲ್ಲಿಸಿ, ನೇಯ್ದಿ ಉದ್ಯಮ ಉಳಿಸಲು
*ಲಾಳಿರಹಿತ ರೇಪಿಯರ್ ಮಗ್ಗಗಳಲ್ಲಿ ಸಾಂಪ್ರದಾಯಿಕ ಜರಿ ಮಿಶ್ರಿತ ಸೀರೆ ನೇಯುವುದನ್ನು ಸಂಪೂರ್ಣವಾಗಿ ನಿಷೇಧಿಸಲು ಕಾಯ್ದೆ ರೂಪಿಸಬೇಕೆಂದು
*ಅಳಿವಿನ ಅಂಚಿನಲ್ಲಿರುವ ನೇಕಾರರನ್ನು ಮತ್ತು ನೇಕಾರ ಕಾರ್ಮಿಕರನ್ನು ರಕ್ಷಿಸಲು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ತಕ್ಷಣ ಧಾವಿಸಿ ಬರಬೇಕೆಂದು ಒತ್ತಾಯಿಸಿ ನೇಕಾರರು ಬಂದ್ ಗೆ ಮುಂಗಾಗಿದ್ದಾರೆ.

ನೇಯ್ದಿ ಉದ್ಯಮವನ್ನು ನಂಬಿ ಲಕ್ಷಾಂತರ ಜನರು ಬದುಕನ್ನು ಸಾಗಿಸುತ್ತಿದ್ದಾರೆ ಆದರೆ ಲಾಳಿ ರಹಿತ ಆಧುನಿಕ ಮಗ್ಗಗಳಲ್ಲಿ ಉತ್ಪಾದಿಸಿದ ಸೂರತ್ ಮತ್ತು ಬೆಳಗಾವಿ ಸೀರೆಗಳ ಹಾವಳಿಯಿಂದ ನಮ್ಮ ನೇಕಾರರು ಸಾಕಷ್ಟು ಸಮಸ್ಯೆ ಎದುರಿಸುತ್ತಿದ್ದಾರೆ. ನೇಕಾರಿಕೆ ಉದ್ಯಮ ಉಳಿಸಲು ಸರ್ಕಾರ ಈ ಕೂಡಲೇ ಮಧ್ಯೆ ಪ್ರವೇಶಿಸಿ ನೇಕಾರರರನ್ನು ಉಳಿಸಿಬೇಕು ಎಂದರು.

ಲಾಳಿರಹಿತ ರೇಪಿಯರ್ ಮಗ್ಗಗಳಲ್ಲಿ ಸಾಂಪ್ರದಾಯಿಕ ಜರಿ ಮಿಶ್ರಿತ ಸೀರೆ ನೇಯುವುದನ್ನು ಸಂಪೂರ್ಣವಾಗಿ ನಿಷೇಧಿಸಲು ಕಾಯ್ದೆ ರೂಪಿಸಿ ಅಳಿವಿನ ಅಂಚಿನಲ್ಲಿರುವ ನೇಕಾರರನ್ನು ಮತ್ತು ನೇಕಾರ ಕಾರ್ಮಿಕರನ್ನು ರಕ್ಷಿಸಲು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ತಕ್ಷಣ ಧಾವಿಸಿ ಬರಬೇಕೆಂದು ಮನವಿ ಮಾಡಿದರು.

ಮುಖಂಡರಾದ ನರಸಿಂಹಮೂರ್ತಿ ಮಾತನಾಡಿ ಈ ಸ್ವಯಂ ಪ್ರೇರಿತ ಬಂದ್ ಅನ್ನು ಬೆಂಬಲಿಸಲು ಊರಿನ ಎಲ್ಲಾ ಸಂಘ/ಸಂಸ್ಥೆಗಳು, ರಾಜಕೀಯ ಪಕ್ಷಗಳು, ರೈತ ಕಾರ್ಮಿಕ, ದಲಿತ, ಕನ್ನಡಪರ, ವಿದ್ಯಾರ್ಥಿ-ಯುವಜನ, ಮಹಿಳಾ ಸಂಘಗಳು, ಎಲ್ಲಾ ರೀತಿಯ ವ್ಯಾಪಾರ ಸಂಘಗಳು, ಎಲ್ಲಾ ನೇಕಾರ ಸಂಘಟನೆಗಳು, ಸಹಕಾರಿ ಸಂಘಗಳು ಭಾಗವಹಿಸಿ ಬೆಂಬಲಿಸಲಿವೆ.

ಜನವರಿ 4 ರಂದು ನಗರದ ಬಯಲು ಬಸವಣ್ಣ ದೇವಸ್ಥಾನದ ಮುಂಭಾಗದಿಂದ ಸಂಜೆ 4ಗಂಟೆಗೆ ಬೈಕ್ ರಾಲಿ ಏರ್ಪಡಿಸಲಾಗಿದೆ ಹಾಗೂ ಜನವರಿ 5ರಂದು ಸಿದ್ದಲಿಂಗಯ್ಯ ವೃತ್ತ (ಬಸ್ ನಿಲ್ದಾಣ) ದಲ್ಲಿ ಬಹಿರಂಗ ಸಭೆ ಏರ್ಪಡಿಸಲಾಗಿದೆ ಈ ಬಂದ್ ಯಶಸ್ವೀಗೊಳಿಸಲು ನೇಕಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಬೆಂಬಲಿಸಬೇಕು ಎಂದರು. ಈ ವೇಳೆ ದೊಡ್ಡಬಳ್ಳಾಪುರ ಟೆಕ್ಸ್ ಟೈಲ್ ವೀವರ್ಸ್ ಅಸೋಸಿಯೇಷನ್ ಪದಾಧಿಕಾರಿಗಳು, ದೊಡ್ಡಬಳ್ಳಾಪುರ ತಾಲೂಕು ಎಲ್ಲಾ ನೇಕಾರ ಸಂಘಟನೆಗಳು, ಮತ್ತು ನೇಕಾರ ಸಹಕಾರ ಸಂಘಗಳು, ದೊಡ್ಡಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ನೇಕಾರ ಸಂಘಟನೆಗಳ ಮುಖಂಡರು, ಸರ್ವ ಪಕ್ಷಗಳ ಮುಖಂಡರು, ಜವಳಿ ಉದ್ಯಮದ ತಜ್ಞರು, ಜನಪ್ರತಿನಿಧಿಗಳು ಹಾಜರಿದ್ದರು.

## ಗಣರಾಜ್ಯೋತ್ಸವ ದಿನ ಕಪ್ಪುಪಟ್ಟಿ ಪ್ರತಿಭಟನೆ: ಕನ್ನಡಿಗರ ಕರವೇ ಘೋಷಣೆ




**ದೊಡ್ಡಬಳ್ಳಾಪುರ** : ಸರ್ಕಾರಿ ಜಾಗಗಳ ಉಳುವಿಕೆಗೆ ಹಾಗೂ ಅಭಿವೃದ್ಧಿಗಳಿಗೆ ಕನ್ನಡಿಗರ ಕರ್ನಾಟಕ ರಕ್ಷಣಾ ವೇದಿಕೆ ಪಡುತ್ತಿರುವ ಪ್ರಯತ್ನಕ್ಕೆ ನೀರೆರೆಚುವಂತೆ ಸರ್ಕಾರಿ ಅಧಿಕಾರಿಗಳ ನಿರ್ಲಕ್ಷ್ಯ ಎದ್ದುಕಾಣುತ್ತಿದೆ. ಒತ್ತುವರಿಯಾಗಿರುವ ಸರ್ಕಾರಿ ಜಾಗಗಳನ್ನು ಉಳಿಸುವಂತೆ ಹಲವು ಬಾರಿ ನಾವು ಮನವಿ ಸಲ್ಲಿಸಿದರು ಅಧಿಕಾರಿ ಯಾವುದೇ ಕ್ರಮ ಕೈಗೊಂಡಿಲ್ಲ ಈ ನಿರ್ಲಕ್ಷದೋರಣೆ ಖಂಡಿಸಿ ಜನವರಿ 26ರಂದು ಕಪ್ಪು ಬಾವುಟ ಪ್ರದರ್ಶನ ಮಾಡಲಿದ್ದೇವೆ ಎಂದು ಕನ್ನಡಿಗರ ಕರ್ನಾಟಕ ರಕ್ಷಣಾ ವೇದಿಕೆ ಸಂಸ್ಥಾಪಕ ಅಧ್ಯಕ್ಷ ಬಿ ಎಸ್ ಚಂದ್ರಶೇಖರ್ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು ನಗರದ ಸೋಮೇಶ್ವರ ಕುಂಟೆ, ಭಗತ್ ಸಿಂಗ್ ಕ್ರೀಡಾಂಗಣದ ಹಿಂಭಾಗದ ಸರ್ಕಾರಿ ಜಮೀನು ಒಳಗೊಂಡತೆ ಹಲವು ಪ್ರಕರಣಗಳು ಬಗೆಹರಿಯಬೇಕಿದೆ.ಅಲ್ಲದೇ ನಕಲಿ ದಾಖಲಾತಿಗಳನ್ನು ಸೃಷ್ಟಿಸಿ ತಾಲ್ಲೂಕಿನ ಅರೇಹಳ್ಳಿ ಗುಡ್ಡದಹಳ್ಳಿ ಬಳಿ ಜಮೀನು ಕಬಳಿಸಿದವರ ವಿರುದ್ಧ ಈವರೆಗೂ ಯಾವುದೇ ಕ್ರಮ ಕೈಗೊಂಡಿಲ್ಲ ಇಂತಹ ಹಲವಾರು ಪ್ರಕರಣಗಳು ನಮ್ಮೆದುರಿದ್ದು ಅಧಿಕಾರಿಗಳು ಜನವರಿ 26ರ ಒಳಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿ ಮಾಡುತ್ತೇವೆ.

ಸಂಘಟನೆ ವತಿಯಿಂದ ಈಗಾಗಲೇ ತಾಲ್ಲೂಕಿನ ಕಸಬಾ ಹೋಬಳಿ, ಗಂಗಾಧರಪುರ ಗ್ರಾಮದ ಸರ್ವೇ ನಂಬರ್ 17ರ ಸರ್ಕಾರಿ ಕುಂಟೆ 2-04 ಎ/ಗುಂ ಜಾಗವಿದ್ದು, ಸದರಿ ಜಾಗವನ್ನು ಕುಂಟೆಯಾಗಿಯೇ ಉಳಿಸಿ ಅಭಿವೃದ್ಧಿ ಪಡಿಸುವ ಬಗ್ಗೆ,ಅರೇಹಳ್ಳಿಗುಡ್ಡದಹಳ್ಳಿ ಗ್ರಾಮದ ಸರ್ವೇ ನಂಬರ್ 57ರ ಸರ್ಕಾರಿ ಗೋಮಾಳವಿದ್ದು, ಸದರಿ ಜಾಗದ ದಾಖಲೆಗಳನ್ನು ನಕಲು ಸೃಷ್ಟಿಸಿರುವ ಬಗ್ಗೆ, ನಗರದ ರೋಜಿಪುರ ಗ್ರಾಮದ ಸರ್ವೇ ನಂಬರ್ 93ರ 0-23 ಗುಂಟೆಯ ಆ ಖರಾಬು ಜಾಗವಿದ್ದು, ಆ ಜಾಗದಲ್ಲಿ ಖಾಸಗಿಯವರು ಕಾಮಗಾರಿಯನ್ನು ನಡೆಸುತ್ತಿದ್ದು ಅದನ್ನು ನಿಲ್ಲಿಸಲು ಕೋರಿ.ಗಂಗಾಧರಪುರ ಗ್ರಾಮದ ಸರ್ವೇ ನಂಬರ್ 124ರಲ್ಲಿನ ಸ್ಮಶಾನದ ಜಾಗದಲ್ಲಿ 25*70 ಅಡಿಗಳ ಜಾಗದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ವಾಣಿಜ್ಯ ಮಳಿಗೆಗಳನ್ನು ತೆರವುಗೊಳಿಸುವ ಬಗ್ಗೆ,ದೊಡ್ಡಬಳ್ಳಾಪುರ ತಾಲ್ಲೂಕಿನ ಭಗತ್ ಸಿಂಗ್ ಕ್ರೀಡಾಂಗಣದ ಬಳಿ ಪರಿಶಿಷ್ಟ ಪಂಗಡದ ಹೆಣ್ಣುಮಕ್ಕಳ ವಿದ್ಯಾರ್ಥಿ ನಿಲಯಕ್ಕೆ ಮೀಸಲಿಟ್ಟ ಜಾಗವನ್ನು ಅತಿಕ್ರಮಿಸಲು ನಾಮಫಲಕ ಹಾಕಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ, ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಪದೇ ಪದೇ ಸರ್ಕಾರಿ ಜಾಗಗಳನ್ನು ಅತಿಕ್ರಮಿಸಲು ನಾಮಫಲಕ ನೆಡುತ್ತಿರುವ ಭೂಗಳ್ಳರ ವಿರುದ್ಧ ಕಾನೂನು ಕ್ರಮಕ್ಕೆಗೊಳ್ಳುವ ಬಗ್ಗೆ ಮನವಿ ನೀಡಿದ್ದು. ನಿರಂತರವಾಗಿ ಅನುಸರಿಸಿದರೂ ಕೂಡ ಅಧಿಕಾರಿಗಳಿಂದ ಯಾವುದೇ ಕ್ರಮ ಕೈಗೊಂಡಿಲ್ಲ ಎಂದರು.

ಹಾಗಾಗಿ ಈ ಮಾದರಿಯನ್ನು ನೋಡಿದರೆ, ಸ್ವಾತಂತ್ರ್ಯ ಹಾಗೂ ಗಣರಾಜ್ಯದ ಹಕ್ಕುಗಳು ಕೇವಲ ಭೂಗಳ್ಳರಿಗೆ ಹಾಗೂ ಭೂಗಳ್ಳರಿಗೆ ಸಹಕರಿಸುವ ಅಧಿಕಾರಿಗಳಿಗಿದೆಯೇ ಹೊರತು ಜನಸಾಮನ್ಯರಿಗಲ್ಲ ಎಂದು ಭಾಸವಾಗುತ್ತಿದೆ. ಅತಿ ಜರೂರಾಗಿ ಮೇಲ್ಕಂಡ ಈ ಎಲ್ಲಾ ವಿಚಾರಗಳಿಗೆ ಸಂಬಂಧಿಸಿದಂತೆ ಅಧಿಕಾರಿಗಳು ಕಾನೂನು ಕ್ರಮ ಕೈಗೊಳ್ಳಬೇಕೆಂದು ಕನ್ನಡಿಗರ ಕರ್ನಾಟಕ ರಕ್ಷಣಾ ವೇದಿಕೆ ಆಶಿಸುತ್ತದೆ. ಇಲ್ಲವಾದಲ್ಲಿ ಅಧಿಕಾರಿಗಳ ನಿರ್ಲಕ್ಷ್ಯವನ್ನು ಧಿಕ್ಕರಿಸುತ್ತಾ,ಜನವರಿ 26ರಂದು ನಡೆಯುವ ಗಣರಾಜ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣಕ್ಕೆ ಗೌರವಸಲ್ಲಿಸಿ, ನಂತರ ಅಧಿಕಾರಿಗಳ ಭಾಷಣವನ್ನು ಖಂಡಿಸಿ, ಕಪ್ಪು ಪಟ್ಟಿ ಧರಿಸಿ ಹೋರಾಟ ಮಾಡಬೇಕೆಂದು ತೀರ್ಮಾನಿಸಿದ್ದೇವೆ ಎಂದರು.

ಈ ವೇಳೆ ಕನ್ನಡಿಗರ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಪ್ರದಾನ ಕಾರ್ಯದರ್ಶಿ ಆರ್ ರಮೇಶ್. ರಾಜ್ಯ ಮುಖಂಡ ಪಿ ವಾಸು. ಜಿಲ್ಲಾ ಯುವ ಘಟಕ ಅಧ್ಯಕ್ಷ ರಂಜಿತ್ ಗೌಡ. ತಾಲೂಕು ಅಧ್ಯಕ್ಷ ವಿನಯ ಆರಾಧ್ಯ. ತಾಲೂಕು ಕಾರ್ಯದರ್ಶಿ ಪ್ರದೀಪ್ ಕುಮಾರ್ ಸೇರಿದಂತೆ ಹಲವು ಪ್ರಮುಖರು ಹಾಜರಿದ್ದರು.

## ಅಖಂಡ ಕರ್ನಾಟಕದಲ್ಲಿ ನಿಜವಾದ ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯಬೇಕು: ನಟ ಚೇತನ್



**ದೇವನಹಳ್ಳಿ** :-ಬಾಬಾ ಸಾಹೇಬ್ ಅಂಬೇಡ್ಕರ್ ಅವರ ತತ್ವಗಳನ್ನು ಅನುಸರಿಸಿ, ಯುವಕರು ಸಾಮಾಜಿಕ ಹೋರಾಟ ಗಳಲ್ಲಿ ತೊಡಗಿಸಿಕೊಂಡು ಸಮಾನತೆ, ಶಿಕ್ಷಣ, ಕೌಶಲ್ಯ ಅಭಿವೃದ್ಧಿ ಮತ್ತು ವೈಜ್ಞಾನಿಕ ಚಿಂತ ನೆಯ ಮೂಲಕ ಬದಲಾವಣೆ ತರಬೇಕು ಎಂದು ನಟ ಚೇತನ್ ಅಹಿಂಸಾ ಹೇಳಿದರು.

ದೇವನಹಳ್ಳಿ ಪಟ್ಟಣದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಸಮ ಸಮಾ ಜದ ಸಮಾನತೆ ಸಭೆಯನ್ನು ಸಾರ್ವಜನಿಕ ಸಂಪರ್ಕ ಕೇಂದ್ರ ಹಾಗೂ ದಲಿತ ಒಕ್ಕೂಟದಿಂದ ಹಮ್ಮಿ ಕೊಂಡಿದ್ದ ವೇಳೆ ಮಾತನಾಡಿ, ಸಮಾಜದಲ್ಲಿ ಪುರುಷ ಪ್ರಧಾನ ವ್ಯವಸ್ಥೆ ಯಿಂದ ಅಸಮಾನತೆ ಉಂಟಾಗಿದೆ. ಅಸಮಾನತೆಯ ವ್ಯವಸ್ಥೆಯನ್ನು ನಾವುಗಳು ತಿದ್ದಬೇಕು.

ಅಸಮಾನತೆ, ಅನ್ಯಾಯವನ್ನು ನಿರಂತರ ವಾಗಿ ಪ್ರಶ್ನೆ ಮಾಡಬೇಕು. ಆಳುವ ಶಕ್ತಿಗಳು ಮನಸ್ಸು ಮಾಡಿದರೆ ಮಾತ್ರ ನಾವು ಅಭಿವೃದ್ಧಿ ಯಾಗಲು ಸಾಧ್ಯ. ಜನರು ರಾಜಕೀಯ ಗಟ್ಟಿತನವನ್ನು ಬೆಳಸಿಕೊಳ್ಳಬೇಕು.

ಪೇರಿಯರ್, ಕ್ಯಾನ್ಸಿರಾಂ ಹಾಗೂ ನಮ್ಮ ವ್ಯಾಖ್ಯಾನ ದಲ್ಲೂ ಸಮ ಸಮಾಜ ನಿರ್ಮಾಣ ವಾಗಬೇಕೆಂಬು ವುದು ಆಗಿದೆ. ರಾಜ್ಯದ 186 ಕ್ಷೇತ್ರಗಳಲ್ಲಿ ಸಮಾ ನತೆಯ ಸಭೆಗಳನ್ನು ನಡೆಸಿ ಸಮ ಸಮಾಜ ಯಾವ ರೀತಿ ನಿರ್ಮಾಣ ಮಾಡಲು ಸಾಧ್ಯ.

ಸಮಾಜದಲ್ಲಿ ಸಮಾನತೆ ಸ್ಥಾಪಿಸಲು ಎಲ್ಲರಿಗೂ ನ್ಯಾಯ ತುರುಕು ವ್ಯವಸ್ಥೆ ಅತ್ಯಗತ್ಯ ಇದಕ್ಕಾಗಿ ನಿರಂತರ ಜಾಗೃತಿ ಚರ್ಚೆಗಳು ಮತ್ತು ಹೋರಾಟಗಳು ಪ್ರಚಲವಾಗಿರ ಬೇಕೆಂದು ದಲಿತ ಮುಖಂಡರು ಹಾಗೂ ಕಾರ್ಯಕರ್ತರಿಗೆ ಅರಿವು ಮೂಡಿಸಿದರು.

ಸಾರ್ವಜನಿಕ ಸಂಪರ್ಕ ಕೇಂದ್ರ ಸಂಸ್ಥಾಪಕ ಸಹದೇಶ್ ಮಾತನಾಡಿ, ದೇಶದಲ್ಲಿ ಅಸ್ಪೃಶ್ಯತೆ ತೊಡೆದು ಹಾಕಲು ಹಾಗೂ ತಳ ಸಮುದಾಯಗಳಿಗೆ ಅಧಿಕಾರದ ಹಕ್ಕು ಪಡೆಯಲು ಅಹಿಂಸ ಚೇತನ್ ಅವರ ಸಂವಾದ ಕಾರ್ಯಕ್ರಮ ಬಹಳಷ್ಟು ಪ್ರೇರಣೆ ನೀಡಲಿದೆ ತಡವಾಗಿ ತುರ್ತಾಗಿ ಕಾರ್ಯಕ್ರಮ ಆಯೋಜನೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕ ಸಂಪರ್ಕ ಕೇಂದ್ರದಿಂದ ಆಹ್ವಾನಿಸಲು ಕಷ್ಟ ಸಾಧ್ಯವಾಗಿದೆ ಮುಂದಿನ ದಿನಗಳಲ್ಲಿ ಮತ್ತಷ್ಟು ದೊಡ್ಡ ಮಟ್ಟದಲ್ಲಿ ಕಾರ್ಯಕ್ರಮ ಆಯೋಜಿಸಲು ಪ್ರಾಮಾಣಿಕವಾಗಿ ಶ್ರಮಿಸುತ್ತೇನೆಂದರು.

ಈ ಸಂದರ್ಭದಲ್ಲಿ ಸುಮಿತ್ರ, ಪ್ರಶಾಂತ್, ಯಲಿಯೂರು ಪಿಳ್ಳೇಗೌಡ, ವೆಂಕಟಸ್ವಾಮಿ, ಬೆಟ್ಟಕೋಟೆ ನಾರಾಯಣಪ್ಪ, ಸಾವಕನಹಳ್ಳಿ ಸುರೇಶ್ ಸೇರಿದಂತೆ ದಲಿತ ಪರ ಸಂಘಟನೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

## ಕೇಶವಮೂರ್ತಿ ಎಂಗೆ ಜಿಲ್ಲಾಧ್ಯಕ್ಷ ಸ್ಥಾನ: ಆದೇಶ ಪತ್ರ ನೀಡಿದ ಶಾಸಕ ಎಸ್ ಟಿ ಸೋಮಶೇಖರ್



**ಪೀಣ್ಯ ದಾಸರಹಳ್ಳಿ** : ಕ್ಷೇತ್ರದ ಶಾಸಕ ಎಸ್ ಟಿ ಮಾಜಿ ಸಚಿವ ಹಾಗೂ ಸೋಮಶೇಖರ್ ಅವರ ಯಶವಂತಪುರ ವಿಧಾನಸಭಾ ಮಾರ್ಗದರ್ಶನ ಸಲಹೆ ಸಹಕಾರದೊಂದಿಗೆ, ಮುಖ್ಯ ಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಹಾಗೂ ರಾಜ್ಯಾಧ್ಯಕ್ಷ ಡಿಕೆ ಶಿವಕುಮಾರ್, ಮತ್ತು ಕಾಂಗ್ರೆಸ್ ಕಮಿಟಿ ಬೀದಿ ಬದಿ ವ್ಯಾಪಾರಿಗಳ ವಿಭಾಗದ ರಾಜ್ಯಾಧ್ಯಕ್ಷ ರಂಗಸ್ವಾಮಿ ನನ್ನನ್ನು ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಕಮಿಟಿ ಬೀದಿ ಬದಿ ವ್ಯಾಪಾರಿಗಳ ವಿಭಾಗದ ಜಿಲ್ಲಾಧ್ಯಕ್ಷ ರಾಗಿ ಕೇಶವಮೂರ್ತಿ ಎಂ ಆಯ್ಕೆ ಮಾಡಿದ ಶಾಸಕ ಎಸ್ ಟಿ ಸೋಮಶೇಖರ್ ಅವರು ನೂತನ ಜಿಲ್ಲಾಧ್ಯಕ್ಷ ಕೇಶವಮೂರ್ತಿ ಎಂ ಅವರಿಗೆ ನೇಮಕಾತಿ ಪ್ರಮಾಣ ಪತ್ರ ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಕಮಿಟಿ ಉಪಾಧ್ಯಕ್ಷ ಮಂಜುನಾಥ್ ಟ್ರಾವೆಲ್ಸ್, ಸುರೇಶ್ ಗೌಡರು, ಮಹಿಳಾ ಪ್ರಧಾನ ಕಾರ್ಯದರ್ಶಿ ಮಹಾಲಕ್ಷ್ಮಿ, ಮಹಿಳಾ ಬ್ಲಾಕ್ ಅಧ್ಯಕ್ಷೆ ಚಂದ್ರಕಲಾ ಸೇರಿದಂತೆ ಕಾಂಗ್ರೆಸ್ ಮುಖಂಡರು ಮಹಿಳೆಯರು ಕಾರ್ಯಕರ್ತರು ಕೇಶವಮೂರ್ತಿ ಅಭಿಮಾನಿಗಳು ನೂತನ ಜಿಲ್ಲಾಧ್ಯಕ್ಷ ಕೇಶವಮೂರ್ತಿ ಅವರಿಗೆ ಹೂವು ಗುಚ್ಛ ನೀಡಿ ಶುಭ ಹಾರೈಸಿದರು.

## 6 ವರ್ಷದ ಬಾಲಕಿ ಮೇಲೆ ಗ್ಯಾಂಗ್ ರೇಪ್

**ಲಕ್ನೋ:** ಉತ್ತರ ಪ್ರದೇಶದ ಬುಲಂದ್‌ಶಹರ್ ಜಿಲ್ಲೆಯ ಸಿಕಂದರಾಬಾದ್ ಕೈಗಾರಿಕಾ ಪ್ರದೇಶದಲ್ಲಿ 6 ವರ್ಷದ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ (Gangrape) ಎಸಗಿರುವ ಆಘಾತಕಾರಿ ಘಟನೆ ನಡೆದಿದೆ. ಬಳಿಕ ಆಕೆಯನ್ನ ಹತ್ಯೆ ಮಾಡಲಾಗಿದ್ದು, ಗುರುತು ಮರೆಮಾಚಲು ಕಿರಾತಕರು ದೇಹವನ್ನ ಮನೆಯ ಛಾವಣಿಯಿಂದ ಕೆಳಗೆ ಎಸೆದಿದ್ದಾರೆ. ಘಟನೆಗೆ ಸಂಬಂಧಿಸಿದ ಆರೋಪಿಗಳನ್ನ ಪೊಲೀಸರು ಎನ್‌ಕೌಂಟರ್ ಬಳಿಕ ಬಂಧಿಸಿದ್ದಾರೆ.

ಘಟನೆಯು ಶುಕ್ರವಾರ ಸಂಜೆ ನಡೆದಿದೆ. ಫಿರೋಜಾಬಾದ್ ಜಿಲ್ಲೆಯ ಕಾರ್ಮಿಕನ ಮಗಳಾದ ಈ ಬಾಲಕಿ ಮನೆಯ ಮೇಲ್ಛಾವಣಿಯಲ್ಲಿ ಆಟವಾಡುತ್ತಿದ್ದಳು. ನೆರೆ ಮನೆಯಲ್ಲಿ ಬಾಡಿಗೆಗೆ ಇದ್ದ ಇಬ್ಬರು ಯುವಕರು ರಾಜೂ (ಬಲರಾಂಪುರ ಜಿಲ್ಲೆಯ ಭಗವಾನ್‌ಪುರ ಮೂಲದವನು) ಮತ್ತು ವೀರು ಕಶ್ಯಪ್ (ಲಖೀಂಪುರ ಖೀರಿ ಜಿಲ್ಲೆಯ ಗೋಲಾ ಗೋರಖನಾಥ ಮೂಲದವನು) – ಮದ್ಯ ಅಮಲಲ್ಲಿ ಬಾಲಕಿ ಮೇಲೆ ದೌರ್ಜನ್ಯ ಎಸಗಿದ್ದಾರೆ. ಬಾಲಕಿ ತೀವ್ರವಾಗಿ ಒದ್ದಾಡಿ ಕೂಗಾಡಿದ್ದರಿಂದ ಆಕೆಯನ್ನ ಕೊಂದು ಸಾಕ್ಷ್ಯ ನಾಶ ಮಾಡುವ ಉದ್ದೇಶದಿಂದ 3ನೇ ಮಹಡಿಯ ಛಾವಣಿಯಿಂದ ಕೆಳಗೆ ಎಸೆದಿದ್ದಾರೆ. ಮೊದಲು ಬಾಲಕಿ ಛಾವಣಿಯಿಂದ ಬಿದ್ದು ಸಾವನ್ನಪ್ಪಿದ್ದಾಳೆ ಎಂಬ ಸುದ್ದಿ ಹರಡಿತ್ತು. ಆದರೆ ಪೊಲೀಸ್ ತನಿಖೆಯಲ್ಲಿ ಸಾಮೂಹಿಕ ಅತ್ಯಾಚಾರ ಮತ್ತು ಹತ್ಯೆಯ ಸತ್ಯ ಬಯಲಾಗಿದೆ ಪತ್ತೆಯಾಗಿದ್ದು ಹೇಗೆ? ಬಾಲಕಿ ಕಾಣೆಯಾದ ಸುದ್ದಿ ತಿಳಿದ ತಕ್ಷಣ ಪೊಲೀಸರು ಶೋಧ ಕಾರ್ಯ ಆರಂಭಿಸಿದರು. ರಾತ್ರಿ ವೇಳೆ ಆರೋಪಿಗಳು ಒಂದು ನಿರ್ಮಾಣ ಹಂತದ ಕಾಲೋನಿಯಲ್ಲಿ ಅಡಗಿಕೊಂಡಿದ್ದ ಸ್ಥಳಕ್ಕೆ ಪೊಲೀಸ್ ತಂಡಗಳು ದಾಳಿ ನಡೆಸಿದವು. ಪೊಲೀಸರನ್ನು ಕಂಡ ಆರೋಪಿಗಳು ಗುಂಡು ಹಾರಿಸಿದರು. ಇದಕ್ಕೆ ಪ್ರತಿಯಾಗಿ ಕಾರ್ಯಾಚರಣೆಯಲ್ಲಿ ಪೊಲೀಸರು ಗುಂಡು ಹಾರಿಸಿದ್ದು, ಇಬ್ಬರು ಆರೋಪಿಗಳ ಕಾಲಿನಲ್ಲಿ ಗಾಯಗೊಂಡಿದೆ. ನಂತರ ಅವರನ್ನು ಬಂಧಿಸಲಾಗಿದೆ ಮತ್ತು ಅಕ್ರಮ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಗಲಭೆ ಬಗ್ಗೆ ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರ ಕಳವಳ

**ಬೆಂಗಳೂರು:** ಬಳ್ಳಾರಿಯಲ್ಲಿ ನಡೆದಿರುವ ಗುಂಡಿನ ದಾಳಿ, ಗಲಭೆ ಪ್ರಕರಣದ ಬಗ್ಗೆ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ.

ಬಳ್ಳಾರಿ ಘಟನೆಯನ್ನು ಟಿವಿಯಲ್ಲಿ ನೋಡಿದ್ದೇನೆ. ಗುಂಪು ಘರ್ಷಣೆ ಆಗಿದೆ. ಶಾಸಕರು, ಇನ್ನೂ ಯಾರು ಯಾರು ಭಾಗಿ ಆಗಿದ್ದಾರೆ ಎನ್ನುವುದು ಗೊತ್ತಿಲ್ಲ ಎಂದರು. ಗಲಭೆಯಲ್ಲಿ ಒಬ್ಬ ವ್ಯಕ್ತಿ ಮೃತಪಟ್ಟಿದ್ದಾನೆ. ಗುಂಡು ಹೊಡೆದವರು ಯಾರು ಎಂದು ಗೊತ್ತಿಲ್ಲ. ಜನಾರ್ದನ ರೆಡ್ಡಿ ಅವರು ಮನೆಯಲ್ಲಿ ಇದ್ದಿದ್ದರೆ ಅಪಾಯ ಆಗ್ತಿತ್ತು ಎನ್ನುವ ಸುದ್ದಿ ನೋಡಿದೆ. ಎಲ್ಲಾ ವರದಿ ಬಂದ ಮೇಲೆ ಕ್ರಮ ಜರುಗಿಸುವುದಾಗಿ ಮುಖ್ಯಮಂತ್ರಿಗಳು ಹೇಳಿದ್ದಾರೆ. ಈಗಾಗಲೇ ನಾಲ್ಕು ಗಳು ಆಗಿವೆಯಂತೆ. ಖಾಸಗಿ ವ್ಯಕ್ತಿ ಹೊರಗಡೆಯಿಂದ ಗುಂಡು ಹೊಡೆದಿದ್ದು ಎಂದು ಸುದ್ದಿ ನೋಡಿದೆ. ನಿಖರವಾಗಿ ಹೀಗೆ ಎಂದು ಹೇಳಲು ನನಗೆ ಕಷ್ಟ. ಶ್ರೀರಾಮುಲು ಅವರು ಜನಾರ್ಧನ ರೆಡ್ಡಿ ಅವರಿಗೆ ಗೆ ರಕ್ಷಣೆ ಕೊಡಬೇಕು ಎಂದು ಹೇಳಿದ್ದನ್ನು ಕೇಳಿದ್ದೇನೆ ಎಂದರು ಮಾಜಿ ಪ್ರಧಾನಿಗಳು.



ಗನ್ ಸಂಸ್ಕೃತಿ ರಾಜ್ಯಕ್ಕೂ ಬಂತು ಎಂಬ ಬಗ್ಗೆ ಕೇಳಿದ ಪ್ರಶ್ನೆಗೆ; ಈ ಬಗ್ಗೆ ನಾನೇನು ಹೇಳಲ್ಲ. ಕುಮಾರಸ್ವಾಮಿ ಎರಡು ಸಲ ಸಿಎಂ ಆಗಿ ಸಾಕಷ್ಟು ಕ್ರಮ ತಗೊಂಡಿದ್ದಾರೆ. ವಿಪಕ್ಷನಾಯಕನಾಗಿಯೂ ಹೋರಾಟ ಮಾಡಿದ್ದಾರೆ. ಬಳ್ಳಾರಿ ಘಟನೆ ಬಗ್ಗೆ ನಾನು ಏನೂ ಮಾತಾಡಲ್ಲ. ಗೃಹ ಸಚಿವರು ಸಮಯಕ್ಕೆ ಸರಿಯಾಗಿ ಕ್ರಮ ತಗೋತಾರೆ. ಅವಕಾಶ ಕೊಟ್ರೆ ಸಿಎಂ ಆಗ್ತಿನಿ ಎಂದು ಪರಮೇಶ್ವರ್ ಅವರು ಹೇಳಿದ್ದಾರೆ. ಆ ಕಡೆ ಜಾಸ್ತಿ ಗಮನ ಕೊಡ್ತಿದಾರೆ ಎಂದು ದೇವೇಗೌಡರು ಹೇಳಿದರು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ನೈಸ್ ರೋಡ್ ವಿಚಾರದ ಬಗ್ಗೆ ಕಠಿ ಣವಾಗಿ ಮಾತಾಡಿದ್ದಾರೆ. ಅವರ ವಿರುದ್ಧ ಕ್ರಮ ತೆಗೆದುಕೊಳ್ಳು ವುದು ಅನಿವಾರ್ಯ, ಅವರದ್ದು ಅತಿಯಾಗಿದೆ ಎಂದು ಡಿಎಂಸಿ ಹೇಳಿದ್ದಾರೆ. ಡಿಕೆಶಿ ಹಾಗೆ ಹೇಳಿದ್ದು ತುಂಬಾ ಸಂತೋಷ. ಅವರು ಕ್ರಮ ಕೈಗೊಂಡರೆ ಬಹಳ ಸಂತೋಷ ಎಂದು ದೇವೇಗೌಡರು ಹೇಳಿದರು.

ನಾವು ದೇವೇಗೌಡರ ಮೇಲೆ ಯಾವುದೇ ರಿಟ್ ಹಾಕಿಲ್ಲಾ ಎಂದು ಅಶೋಕ್ ಖೇಣಿ ಹೇಳ್ತಾರೆ. ಜನವರಿ 21ರಂದು ಸುಪ್ರೀಂ ಕೋರ್ಟ್ ನಲ್ಲಿ ನೈಸ್ ಕೇಸ್ ಇದೆ. ಮುಖ್ಯ ಕಾರ್ಯದರ್ಶಿ ಅವರನ್ನು ಪಾರ್ಟಿ ಮಾಡಿಲ್ಲಾ. ಬಾಬಾ ಕಲ್ಯಾಣಿ ಅರ್ಜಿದಾರರಾಗಿದ್ದಾರೆ. ರಾಜ್ಯ ಸರ್ಕಾರ ಏನು ಕ್ರಮ ತೆಗೆದುಕೊಳ್ಳುತ್ತೆ ಎಂದು ನೋಡೋಣ. ಡಿಸಿಎಂ ತುಂಬಾ ಕಠಿಣವಾಗಿ ಹೇಳಿದ್ದಾರೆ. ಅವರ ಹೇಳಿಕೆಯನ್ನು ನಾನು ಸ್ವಾಗತಿಸುತ್ತೇನೆ ಎಂದರು ಮಾಜಿ ಪ್ರಧಾನಿಗಳು.

2024ರಲ್ಲಿ ನಾನು ಸಿಎಂಗೆ ಪತ್ರ ಬರೆದಿದ್ದೇನೆ. ಎಷ್ಟು ಎಕರೆ ಯಾವ ಯಾವ ಜಾಗದಲ್ಲಿ ಭೂಮಿ ತೆಗೆದುಕೊಂಡಿದ್ದಾರೆ? ಇದರ ಮೇಲೆ ಕ್ರಮ ಕೈಗೊಳ್ಳಿ ಎಂದು ಪತ್ರ ಬರೆದಿದ್ದೇನೆ. ಖೇಣಿ ಮೇಲೆ ಏನು ಕ್ರಮ ತೆಗೆದುಕೊಳ್ತಾರೆ ಎಂಬುದನ್ನು ನೋಡೋಣ. ಅವರು ಕ್ರಮ ತೆಗೆದುಕೊಂಡರೆ ತುಂಬಾ ಸಂತೋಷ ಎಂದು ಮಾಜಿ ಪ್ರಧಾನಿಗಳು ಪ್ರಶ್ನೆಯೊಂದಕ್ಕೆ ಉತ್ತರ ಕೊಟ್ಟರು.

# ಬ್ಯಾನರ್ ಗಲಭೆ: ಶಾಸಕ ಭರತ್ ರೆಡ್ಡಿ ಸೇರಿ ಹಲವರ ವಿರುದ್ಧ ಎಫ್ಐಆರ್

ಬಳ್ಳಾರಿ: ಬ್ಯಾನರ್ ಅಳವಡಿಕೆ ವಿಚಾರಕ್ಕೆ ಉಂಟಾದ ಗಲಾಟೆಯಲ್ಲಿ ಓರ್ವ ಯುವಕ ಮೃತಪಟ್ಟ ವಿಷಯಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಶಾಸಕ ನಾರಾ ಭರತ್ ರೆಡ್ಡಿ ಸೇರಿ ಹಲವರ ವಿರುದ್ಧ ಪೊಲೀಸರು ಎಫ್ಐಆರ್ ದಾಖಲು ಮಾಡಿದ್ದಾರೆ. ಬ್ರೂಸ್ ಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆಯನ್ನು ಚುರುಕುಗೊಳಿಸಿದ್ದಾರೆ.




ಬ್ಯಾನರ್ ಅಳವಡಿಕೆ ವಿಚಾರವಾಗಿ ಆರಂಭವಾದ ವಾಗ್ವಾದ ಕ್ಷಣಾರ್ಧದಲ್ಲೇ ಗಲಾಟೆಯಾಗಿ ವಿಕೋಪಕ್ಕೆ ತಿರುಗಿದೆ. ಈ ವೇಳೆ ನಡೆದ ಹಲ್ಲೆಯಲ್ಲಿ ಯುವಕನೊಬ್ಬ ಗಂಭೀರವಾಗಿ ಗಾಯಗೊಂಡು, ಆಸ್ಪತ್ರೆಗೆ ಸಾಗಿಸುವ ವೇಳೆ ಮೃತಪಟ್ಟಿದ್ದ ಎಂದು ತಿಳಿದುಬಂದಿದೆ. ಘಟನೆ ಸಂಬಂಧ ಶಾಸಕ ಜನಾರ್ದನ ರೆಡ್ಡಿ ಹಾಗೂ ಬಿಜೆಪಿ ಕಾರ್ಯಕರ್ತ ನಾಗರಾಜ್ ನೀಡಿದ ದೂರಿನ ಆಧಾರದ ಮೇಲೆ ಎಫ್ಐಆರ್ ದಾಖಲಾಗಿದೆ. ದೂರಿನಲ್ಲಿ ಶಾಸಕ ಭರತ್ ರೆಡ್ಡಿ ಹಾಗೂ ಅವರ ಆಪ್ತರು ಹಲ್ಲೆ, ಕೊಲೆ ಯತ್ನ ಮತ್ತು ಗಲಾಟೆಗೆ ಕಾರಣರಾದರು ಎಂಬ ಆರೋಪಗಳನ್ನು ಮಾಡಲಾಗಿದೆ. ಈ ಪ್ರಕರಣದಲ್ಲಿ ಶಾಸಕ ಭರತ್ ರೆಡ್ಡಿಯ ಆಪ್ತರಾದ ಸತೀಶ್ ರೆಡ್ಡಿ, ಚಾನಾಳ್ ಶೇಖರ್, ನಾರಾ ಪ್ರತಾಪ್ ರೆಡ್ಡಿ, ನಾರಾ ಸೂರ್ಯನಾರಾಯಣ ರೆಡ್ಡಿ ಸೇರಿದಂತೆ ಹಲವರ ಹೆಸರನ್ನು ಎಫ್ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ. ಶಾಸಕ ಜನಾರ್ದನ ರೆಡ್ಡಿ ಅವರು ತಮ್ಮ ದೂರಿನಲ್ಲಿ ತಮಗೆ ಹಲ್ಲೆ ನಡೆಸಲಾಗಿದೆ ಹಾಗೂ ಕೊಲೆ ಯತ್ನ ನಡೆದಿದೆ ಎಂದು ಆರೋಪಿಸಿದ್ದಾರೆ. ಇತ್ತ ಬಿಜೆಪಿ ಕಾರ್ಯಕರ್ತ ನಾಗರಾಜ್ ಅವರು ಅಕ್ರಮ ಪ್ರವೇಶ, ಜಾತಿ ನಿಂದನೆ, ಕೊಲೆ ಯತ್ನ ಮತ್ತು ಗಲಾಟೆ ಆರೋಪಗಳಡಿ ಪ್ರತ್ಯೇಕ ದೂರು ದಾಖಲಿಸಿದ್ದಾರೆ.

ದೂರು ಸ್ವೀಕರಿಸಿದ ಎಎಸ್‌ಪಿ ರವಿಕುಮಾರ್ ಅವರು ತಕ್ಷಣವೇ ಪ್ರಕರಣ ದಾಖಲಿಸಿ ತನಿಖೆ ಆರಂಭಿಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಸಿಸಿಟಿವಿ ದೃಶ್ಯಾವಳಿ, ಸಾಕ್ಷಿಗಳ ಹೇಳಿಕೆ ಮತ್ತು ಇತರ ಪುರಾವೆಗಳನ್ನು ಸಂಗ್ರಹಿಸಲಾಗುತ್ತಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಈ ಗಲಾಟೆಯ ಹಿನ್ನೆಲೆಯಲ್ಲಿ ಬಳ್ಳಾರಿಯಲ್ಲಿ ಇಂದು ನಡೆಯಬೇಕಿದ್ದ ವಾಲ್ಮೀಕಿ ಪುತ್ಥಳಿ ಅನಾವರಣ ಕಾರ್ಯಕ್ರಮವನ್ನು ಮುಂದೂಡಲಾಗಿದೆ. ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಕಾರ್ಯಕ್ರಮವನ್ನು ಮುಂದೂಡಲಾಗಿದೆ ಎಂದು ಕಾಂಗ್ರೆಸ್ ಶಾಸಕ ನಾರಾ ಭರತ್ ರೆಡ್ಡಿ ಸ್ಪಷ್ಟಪಡಿಸಿದ್ದಾರೆ. ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಹೆಚ್ಚುವರಿ ಪೊಲೀಸ್ ಭದ್ರತೆ ನಿಯೋಜಿಸಲಾಗಿದೆ.

# ಎಣ್ಣೆ ಮತ್ತಲ್ಲಿ ತಿರುಪತಿ ದೇವಸ್ಥಾನದ ಗೋಪುರ ಏರಿ ತಿರುಪತಿಯಿಂದ ಕಿರಿಕ್



ತಿರುಪತಿ: ಮದ್ಯದ ಅಮಲಿನಲ್ಲಿ ವ್ಯಕ್ತಿಯೊಬ್ಬ ತಿರುಪತಿ ತಿರುಮಲ ದೇವಸ್ಥಾನದ ಗೋಪುರ ಏರಿ ಕಿರಿಕ್ ಮಾಡಿದ ಘಟನೆ ತಡರಾತ್ರಿ ನಡೆದಿದೆ. ಭಕ್ತರಂತೆ ದೇವಸ್ಥಾನವನ್ನು ಪ್ರವೇಶ ಮಾಡಿದ್ದ ಈತ ಟೆಂಟ್ ಕಂಬ್‌ಗಳನ್ನು ಹತ್ತಿ ನೇರವಾಗಿ ಗರ್ಭಗುಡಿಯ ಮೇಲಿರುವ ಗೋಪುರವನ್ನು ಏರಿದ್ದಾನೆ. ಗೋಪುರ ಮೇಲಿರುವ ಕಲಶಗಳಿರುವ ಜಾಗವನ್ನು ತಲುಪಿ ಮದ್ಯ ಕೊಡುವಂತೆ ವಿಚಿತ್ರ ಬೇಡಿಕೆ ಇಟ್ಟಿದ್ದಾನೆ. ತೆಲಂಗಾಣದ ನಿಜಾಮಾಬಾದ್ ಜಿಲ್ಲೆಯ ಪೆದ್ದಮಲ್ಲ ರೆಡ್ಡಿ ಕಾಲೋನಿಯ ಕುರ್ಮಾ ವಾಡಾದ ನಿವಾಸಿ ಕುಟ್ಟಡಿ ತಿರುಪತಿ(45) ಕಿರಿಕ್ ಮಾಡಿದ ವ್ಯಕ್ತಿಯಾಗಿದ್ದು ಕೊನೆಗೆ ಮನವೊಲಿಸಿ ಕೆಳಗೆ ಇಳಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. 3 ಗಂಟೆ ಹೈಡ್ರಾಮಾ

ತಿರುಪತಿ ಪೂರ್ವ ಪೊಲೀಸ್ ಠಾಣೆಯ ಸಿಬ್ಬಂದಿ ಮತ್ತು ಅಗ್ನಿಶಾಮಕ ದಳದವರು ಸುಮಾರು 3 ಗಂಟೆಗಳ ಕಾಲ ವ್ಯಕ್ತಿಯನ್ನು ಗೋಪುರದಿಂದ ಕೆಳಗೆ ಇಳಿಯುವಂತೆ ಮನವೊಲಿಸಿದ್ದರು. ಪೊಲೀಸ್ ಸಿಬ್ಬಂದಿ ಶಿಖರವನ್ನು ತಲುಪಿ ಆತನ ಜೊತೆ ಮಾತನಾಡುವಾಗ ತನಗೆ ಕ್ವಾರ್ಟರ್ ಬಾಟಲ್ ಮದ್ಯ ನೀಡಿದರೆ ಮಾತ್ರ ಕೆಳಗೆ ಬರುತ್ತೇನೆ ಎಂದು ಹೇಳಿದ್ದಾನೆ. ಪೊಲೀಸರು ಆತನಿಗೆ ನೀನು ಕೆಳಗೆ ಇಳಿದ ನಂತರ ಮದ್ಯ ನೀಡುತ್ತೇವೆ ಎಂದು ಭರವಸೆ ನೀಡಿದ್ದಾರೆ.

ನಂತರ ಆತ ಕೆಳಗೆ ಇಳಿಯಲು ಒಪ್ಪಿಕೊಂಡಿದ್ದಾನೆ. ಕಬ್ಬಿಣದ ಏಣಿಗಳ ಸಹಾಯದಿಂದ ಸುರಕ್ಷಿತವಾಗಿ ಕೆಳಗೆ ಇಳಿಸಿದ ನಂತರ ಆತನನ್ನು ಪೊಲೀಸರು ಬಂಧಿಸಿದ್ದಾರೆ. ವೈಎಸ್‌ಆರ್ ಕಾಂಗ್ರೆಸ್ ಕಿಡಿ ಸಾಮಾಜಿಕ ಜಾಲತಾಣದಲ್ಲಿ ಈ ವಿಡಿಯೋ ಹಂಚಿಕೊಂಡ ವೈಎಸ್‌ಆರ್ ಕಾಂಗ್ರೆಸ್ ರಾಜ್ಯದ ಚಂದ್ರಬಾಬು ನಾಯ್ಡು ಅವರ ಸಮ್ಮಿಶ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದೆ. ಸರ್ಕಾರದಿಂದ ದೇವಾಲಯದ ಪಾವಿತ್ರ್ಯಕ್ಕೆ ಧಕ್ಕೆಯಾಗಿದೆ ಎಂದು ಸಿಟ್ಟು ಹೊರಹಾಕಿದೆ.

# ನಿಮ್ಹಾನ್ಸ್-ಕಿದ್ವಾಯಿ ಆಸ್ಪತ್ರೆಗಳಲ್ಲಿ 55 ರೋಗಿಗಳು ನಾಪತ್ತೆ ಮೂವರ ಸುಳಿವೇ ಇಲ್ಲ



**ಬೆಂಗಳೂರು:** ಪ್ರತಿಷ್ಠಿತ ಆರೋಗ್ಯ ಸಂಸ್ಥೆಗಳಾದ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ ಹಾಗೂ ಕಿದ್ವಾಯಿ ಸ್ಮಾರಕ ಆಂಕೊಲಾಜಿ ಸಂಸ್ಥೆಗಳಿಂದ ಸಮಾಲೋಚನೆ ಮತ್ತು ಚಿಕಿತ್ಸೆಗೆ ಬಂದಿದ್ದ ಒಟ್ಟು 55 ರೋಗಿಗಳು ನಾಪತ್ತೆಯಾಗಿರುವುದು ತೀವ್ರ ಕಳವಳಕ್ಕೆ ಕಾರಣವಾಗಿದೆ. ಸುಮಾರು 20 ತಿಂಗಳ ಅವಧಿಯಲ್ಲಿ ಈ ಎಲ್ಲಾ ರೋಗಿಗಳು ನಾಪತ್ತೆಯಾಗಿದ್ದು, ಈ ಪೈಕಿ ಇದುವರೆಗೂ ಮೂವರು ರೋಗಿಗಳ ಸುಳಿವೇ ಸಿಕ್ಕಿಲ್ಲವೆಂಬ ಮಾಹಿತಿ ಬಹಿರಂಗವಾಗಿದೆ.

ಅನಿರೀಕ್ಷಿತ ಸಂದರ್ಭಗಳಲ್ಲಿ ನಾಪತ್ತೆ 2024ರ ಜನವರಿ 1ರಿಂದ 2025ರ ಆಗಸ್ಟ್ 14ರವರೆಗೆ ನಾಪತ್ತೆಯಾದ ಹೆಚ್ಚಿನ ರೋಗಿಗಳು ಅತ್ಯಂತ ಅನಿರೀಕ್ಷಿತ ಸಂದರ್ಭಗಳಲ್ಲಿ ಕಾಣೆಯಾಗಿದ್ದಾರೆ ಎಂದು ಹೇಳಲಾಗಿದೆ. ರೋಗಿಗಳ ಪೋಷಕರು ಬಿಲ್‌ಗಳನ್ನು ಪಾವತಿಸಲು, ಔಷಧಿ ಖರೀದಿಸಲು, ಫೋನ್ ಕರೆಗಳಲ್ಲಿ ನಿರತರಾಗಿದ್ದಾಗ ಅಥವಾ ಹೊರರೋಗಿ ವಿಭಾಗದಲ್ಲಿ (OPD) ಇತರರೊಂದಿಗೆ ಅನುಭವ ಹಂಚಿಕೊಳ್ಳುವ ವೇಳೆ ಈ ಘಟನೆಗಳು ನಡೆದಿವೆ ಎಂದು ದಾಖಲೆಗಳು ತಿಳಿಸುತ್ತವೆ.

**ಪತ್ತೆಯಾಗದ ಮೂವರು**

ಜಯನಗರದ ಸಿದ್ದಾಪುರ ಪೊಲೀಸ್ ಠಾಣೆಯ ನಾಪತ್ತೆ ಪ್ರಕರಣಗಳ ದಾಖಲೆ ಪ್ರಕಾರ, ಮಾನಸಿಕ ಅಸ್ವಸ್ಥರಿಗೆ ಓಡಿಹೋಗುವ ಪ್ರವೃತ್ತಿ ನಿಮ್ಹಾನ್ಸ್‌ನ ಉಪ ವೈದ್ಯಕೀಯ ಅಧೀಕ್ಷಕ ಡಾ. ಅರವಿಂದ್ ಎಚ್.ಆರ್ ಮಾತನಾಡಿ, ಮಾನಸಿಕ ಅಸ್ವಸ್ಥತೆಯಿಂದ ಬಳಲುತ್ತಿರುವ ಕೆಲವರಿಗೆ ಓಡಿಹೋಗುವ ಪ್ರವೃತ್ತಿ ಇರುತ್ತದೆ. ಹೆಚ್ಚಿನ ಪ್ರಕರಣಗಳಲ್ಲಿ ನಾವು ಅವರನ್ನು ಪತ್ತೆಹಚ್ಚಿ ಕುಟುಂಬಗಳಿಗೆ ಹಿಂತಿರುಗಿಸುತ್ತೇವೆ.

ಆಸ್ಪತ್ರೆಯಲ್ಲಿ ನಾಪತ್ತೆಯಾದವರ ಪ್ರಕರಣಗಳನ್ನು ಪರಿಶೀಲಿಸಲು ವಿಶೇಷ ಘಟನೆ ವರದಿ ಸಮಿತಿಯಿದೆ ಎಂದರು. ನಾಪತ್ತೆಯಾಗುವವರಲ್ಲಿ ಹೆಚ್ಚಿನವರು ಸ್ಕಿಜೋಫ್ರೇನಿಯಾ, ಬೈಪೋಲಾರ್ ಅಸ್ವಸ್ಥತೆಗಳಿಂದ ಬಳಲುತ್ತಿದ್ದು, ಕೆಲವರಿಗೆ ಬುದ್ಧಿಮಾಂದ್ಯತೆ ಇರುವುದೂ ಕಂಡುಬಂದಿದೆ ಎಂದು ತಿಳಿಸಿದರು.

ಸಮವಸ್ತ್ರ ನೀಡಲು ಅವಕಾಶವಿಲ್ಲ

ಮಾನಸಿಕ ಆರೋಗ್ಯ ರಕ್ಷಣಾ ಕಾಯ್ದೆ-2017ರ ಪ್ರಕಾರ, ಮಾನಸಿಕ ಅಸ್ವಸ್ಥ ರೋಗಿಗಳನ್ನು ಗುರುತಿಸಲು ಯಾವುದೇ ಸಮವಸ್ತ್ರ ನೀಡುವಂತಿಲ್ಲ ಎಂದು ಡಾ. ಅರವಿಂದ್ ಸ್ಪಷ್ಟಪಡಿಸಿದ್ದಾರೆ.

ಈ ಕಾಯ್ದೆಯಂತೆ ಆಸ್ಪತ್ರೆಗಳು ಇನ್ನು ಅಸೈಲಮ್‌ಗಳಲ್ಲ. ರೋಗಿಗಳ ಗೌರವ ಕಾಪಾಡುವುದು ನಮ್ಮ ಜವಾಬ್ದಾರಿ ಎಂದರು. ರೋಗಿಗಳನ್ನು OPDಗೆ ಕರೆತರುವಾಗ ಆರೈಕೆದಾರರು ಹೆಚ್ಚು ಜಾಗರೂಕರಾಗಿರಬೇಕು. ಆಸ್ಪತ್ರೆಯ ಭದ್ರತಾ ಸಿಬ್ಬಂದಿ ಆವರಣದೊಳಗಿನ ಚಲನವಲನಗಳ ಮೇಲೂ ನಿಗಾ ಇಡುತ್ತಾರೆ ಎಂದರು.

ಕಿದ್ವಾಯಿ ನಿರ್ದೇಶಕರ ಪ್ರತಿಕ್ರಿಯೆ

ಕಿದ್ವಾಯಿ ಸಂಸ್ಥೆಯ ನಿರ್ದೇಶಕ ಡಾ. ನವೀನ್ ಟಿ ಮಾತನಾಡಿ, ನಮ್ಮ ಬಳಿ ಬರುವ ಹೆಚ್ಚಿನ ರೋಗಿಗಳು ಮೂರನೇ ಅಥವಾ ನಾಲ್ಕನೇ ಹಂತದ ಕ್ಯಾನ್ಸರ್‌ನಿಂದ ಬಳಲುತ್ತಿದ್ದಾರೆ. ಅವರು ಭರವಸೆ ಕಳೆದುಕೊಳ್ಳದಂತೆ ಚಿಕಿತ್ಸೆ ಜೊತೆಗೆ ಮಾನಸಿಕ ಬೆಂಬಲ ನೀಡಲಾಗುತ್ತದೆ.

ರೋಗಿಗಳು ಕಾಣೆಯಾಗದಂತೆ ಮತ್ತು ಚಿಕಿತ್ಸೆ ತಪ್ಪಿಸಿಕೊಳ್ಳದಂತೆ ರಾಜ್ಯ ಸರ್ಕಾರ 16 ಜಿಲ್ಲೆಗಳಲ್ಲಿ ಜಿಲ್ಲಾ ಡೇಕೇರ್ ಕಿಮೊಥೆರಪಿ ಕೇಂದ್ರಗಳನ್ನು ಸ್ಥಾಪಿಸಿದೆ ಎಂದು ಅವರು ತಿಳಿಸಿದರು.

**ಅಪಾಯದಲ್ಲಿರುವ ರೋಗಿಗಳು**

ಬೆಂಗಳೂರಿನ ಇಎಸ್‌ಐಸಿ ವೈದ್ಯಕೀಯ ಕಾಲೇಜಿನ ಸೈಕಿಯಾಟ್ರಿಸ್ಟ್ ಡಾ. ಎಚ್. ಚಂದ್ರಶೇಖರ್ ಮಾತನಾಡಿ, ಒಮ್ಮೆ ರೋಗಿಗಳು ಮನೆ ಅಥವಾ ಆಸ್ಪತ್ರೆಯಿಂದ ಕಾಣೆಯಾದರೆ, ಅವರು ದೈಹಿಕ ಮತ್ತು ಮಾನಸಿಕ ಅಪಾಯಕ್ಕೆ ಒಳಗಾಗುತ್ತಾರೆ.


ಪುರುಷರು ಹಲ್ಲೆಗೆ ಒಳಗಾಗುವ ಸಾಧ್ಯತೆ ಇದ್ದರೆ, ಮಹಿಳೆಯರು ಲೈಂಗಿಕ ಕಿರುಕುಳಕ್ಕೆ ಒಳಗಾಗುವ ಅಪಾಯವೂ ಇದೆ. ಅಪರೂಪದ ಸಂದರ್ಭಗಳಲ್ಲಿ ಆರೈಕೆದಾರರೇ ಅವರನ್ನು ಆಸ್ಪತ್ರೆಯಲ್ಲೇ ಬಿಟ್ಟು ಹೋಗುವ ಘಟನೆಗಳೂ ಕಂಡುಬಂದಿವೆ ಎಂದು ಎಚ್ಚರಿಸಿದರು.

ಮಾನಸಿಕ ಅಸ್ವಸ್ಥತೆಯ ರೋಗಿಗಳು ಕಾಣೆಯಾಗಲು ಅರಿವಿನ ಕೊರತೆ, ಚಿಕಿತ್ಸೆ ಸೌಲಭ್ಯಗಳ ಅಭಾವ, ಸಾಮಾಜಿಕ ಕಳಂಕ, ಕುಟುಂಬ ಸಮಸ್ಯೆಗಳು ಮತ್ತು ಬಡತನ ಪ್ರಮುಖ ಕಾರಣಗಳಾಗಿವೆ ಎಂದು ಅವರು ಹೇಳಿದರು ಪ್ರತಿಷ್ಠಿತ ಆಸ್ಪತ್ರೆಗಳಿಂದಲೇ ರೋಗಿಗಳು ನಾಪತ್ತೆಯಾಗುತ್ತಿರುವುದು ಸಾರ್ವಜನಿಕ ಆರೋಗ್ಯ

ವ್ಯವಸ್ಥೆಗೆ ಮುಜುಗರ ತಂದಿದೆ. ರೋಗಿಗಳ ಸುರಕ್ಷತೆ, ಆರೈಕೆದಾರರ ಜವಾಬ್ದಾರಿ ಮತ್ತು ಸಂಸ್ಥಾತ್ಮಕ ಮೇಲ್ವಿಚಾರಣೆಯನ್ನು ಇನ್ನಷ್ಟು ಬಲಪಡಿಸುವ ಅಗತ್ಯವಿದೆ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ..

- **ಕಾಡಪ್ಪ ರೋಡನ್ನವರ್ (81) – 23 ಮೇ 2024ರಂದು ನಿಮ್ಹಾನ್ಸ್‌ನಿಂದ ನಾಪತ್ತೆ**
- **ಮುನಿಕೃಷ್ಣಪ್ಪ (70) – 6 ನವೆಂಬರ್ 2025ರಂದು ನಾಪತ್ತೆ**
- **ಶಾಂತಸ್ವಾಮಿ (52) – 30 ಏಪ್ರಿಲ್ 2025ರಂದು ಕಿದ್ವಾಯಿ ಆಸ್ಪತ್ರೆ ಆವರಣದಿಂದ ನಾಪತ್ತೆ**

# 14 ನಕ್ಸಲರನ್ನು ಹೊಡೆದುರುಳಿಸಿದ ಭದ್ರತಾ ಪಡೆ



**ರಾಯ್ಪುರ:** ಛತ್ತೀಸ್‌ಗಢದ ಬಸ್ತಾರ್ ಪ್ರದೇಶದಲ್ಲಿ ಭದ್ರತಾ ಪಡೆಗಳು ಕಾರ್ಯಾಚರಣೆ ನಡೆಸಿ 14 ನಕ್ಸಲರನ್ನು ಎನ್‌ಕೌಂಟರ್ ಮಾಡಿವೆ. ಎರಡು ಪ್ರತ್ಯೇಕ ಕಡೆಗಳಲ್ಲಿ ಎನ್‌ಕೌಂಟರ್ ನಡೆಸಲಾಗಿದೆ. ಉಗ್ರರ ಬಗ್ಗೆ ನಿರ್ದಿಷ್ಟ ಮಾಹಿತಿ ಪಡೆದ ನಂತರ ಜಿಲ್ಲಾ ಮೀಸಲು ಪಡೆ (ಡಿಆರ್‌ಜಿ) ಬಸ್ತಾರ್ ಪ್ರದೇಶದಲ್ಲಿ ಕಾರ್ಯಾಚರಣೆಯನ್ನು ಪ್ರಾರಂಭಿಸಿತ್ತು. ಸ್ವಯಂಚಾಲಿತ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ. ಸುಕ್ಮಾ ಜಿಲ್ಲೆಯ ದಕ್ಷಿಣ ಪ್ರದೇಶದ ಕಾಡಿನಲ್ಲಿ ಶೋಧ ನಡೆಸುತ್ತಿದ್ದಾಗ, ನಕ್ಸಲರು ಡಿಆರ್‌ಜಿ ಸಿಬ್ಬಂದಿಯ ಮೇಲೆ ಗುಂಡು ಹಾರಿಸಿದರು.

ಪ್ರತ್ಯುತ್ತರವಾಗಿ ಭದ್ರತಾ ಪಡೆಗಳು 12 ನಕ್ಸಲರನ್ನು ಹೊಡೆದುರುಳಿಸಿದವು. ಸುಕ್ಮಾ ಜಿಲ್ಲೆಯ ಕಿಸ್ತಾರಾಮ್ ಪ್ರದೇಶದ ಅರಣ್ಯದಲ್ಲಿ ಡಿಆರ್‌ಜಿ ಮತ್ತು ನಕ್ಸಲರ ನಡುವೆ ನಡೆದ ಎನ್‌ಕೌಂಟರ್‌ನಲ್ಲಿ 12 ನಕ್ಸಲರು ಸಾವನ್ನಪ್ಪಿದ್ದಾರೆ. ಸ್ವಯಂಚಾಲಿತ ಶಸ್ತ್ರಾಸ್ತ್ರಗಳನ್ನು ಸಹ ವಶಪಡಿಸಿಕೊಳ್ಳಲಾಗಿದೆ ಎಂದು ಸುಕ್ಮಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಕಿರಣ್ ಚವಾಣ್ ಹೇಳಿದ್ದಾರೆ ಅದೇ ರೀತಿ, ಪಕ್ಕದ ಬಿಜಾಪುರ ಜಿಲ್ಲೆಯಲ್ಲಿ ಬೆಳಗ್ಗೆ 5 ಗಂಟೆ ಸುಮಾರಿಗೆ ಡಿಆರ್‌ಜಿ ಮತ್ತು ಛತ್ತೀಸ್‌ಗಢ ಪೊಲೀಸರ ತಂಡವು ಮಾವೋವಾದಿ ವಿರೋಧಿ ಕಾರ್ಯಾಚರಣೆಯನ್ನು ಪ್ರಾರಂಭಿಸಿತು. ಇದರಲ್ಲಿ ಇಬ್ಬರು ನಕ್ಸಲರು ಸಾವನ್ನಪ್ಪಿದ್ದಾರೆ. ಬಿಜಾಪುರ ಜಿಲ್ಲೆಯ ಅರಣ್ಯ ಪ್ರದೇಶದಿಂದ ಭದ್ರತಾ ಪಡೆಗಳು ಒಂದು ಸೆಲ್ಫ್-ರೀಲೋಡಿಂಗ್ ರೈಫಲ್ (ಎಸ್‌ಎಲ್‌ಆರ್) ಮತ್ತು 12 ಬೋರ್ ರೈಫಲ್‌ಗಳು ಸೇರಿದಂತೆ ಸ್ವಯಂಚಾಲಿತ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡಿವೆ. ಬಿಜಾಪುರ ಜಿಲ್ಲೆಯ ದಕ್ಷಿಣ ಪ್ರದೇಶದಲ್ಲಿ ಶಸ್ತ್ರಸಜ್ಜಿತ ಮಾವೋವಾದಿಗಳ ಉಪಸ್ಥಿತಿಯ ಬಗ್ಗೆ ಗುಪ್ತಚರ ಮಾಹಿತಿಯ ಆಧಾರದ ಮೇಲೆ, ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು. ದಕ್ಷಿಣ ಬಸ್ತಾರ್ ಪ್ರದೇಶದಲ್ಲಿ ಡಿಆರ್‌ಜಿಯ ತಂಡವೊಂದು ಕಾರ್ಯಾಚರಣೆಯಲ್ಲಿತ್ತು.

ಬೆಳಗ್ಗೆ 5 ಗಂಟೆಯಿಂದ ಡಿಆರ್‌ಜಿ ಮತ್ತು ಮಾವೋವಾದಿಗಳ ನಡುವೆ ನಿರಂತರ ಗುಂಡಿನ ಚಕಮಕಿ ನಡೆದಿದೆ ಎಂದು ಬಸ್ತಾರ್ ಶ್ರೇಣಿಯ ಪೊಲೀಸ್ ಇನ್ಸ್‌ಪೆಕ್ಟರ್ ಜನರಲ್ (ಐಜಿಪಿ) ಪಿ ಸುಂದರರಾಜ್ ತಿಳಿಸಿದ್ದಾರೆ.. ಮಾರ್ಚ್ 31 ರೊಳಗೆ ಭಾರತದಲ್ಲಿ ನಕ್ಸಲಿಸಂ ಅನ್ನು ಕೊನೆಗೊಳಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಗಡುವು ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ, ಛತ್ತೀಸ್‌ಗಢದಲ್ಲಿ ಭದ್ರತಾ ಪಡೆಗಳು ನಕ್ಸಲ್ ವಿರೋಧಿ ಕಾರ್ಯಾಚರಣೆಗಳನ್ನು ತೀವ್ರಗೊಳಿಸಿವೆ.

# ಅತ್ಯಾಚಾರಕ್ಕೆ ಯತ್ನಿಸಿದ ವ್ಯಕ್ತಿಯ ಹತ್ಯೆ, ಯುವತಿ ಅರೆಸ್ಟ್

**ಲಕ್ನೋ:** ಅತ್ಯಾಚಾರಕ್ಕೆ ಯತ್ನಿಸಿದ ವ್ಯಕ್ತಿಯಯನ್ನು ಹತ್ಯೆ ಮಾಡಿದ 18 ವರ್ಷದ ಯುವತಿಯೊಬ್ಬಳು ಹತ್ಯೆ ಮಾಡಿರುವುದು ಉತ್ತರ ಪ್ರದೇಶದ ಬಂದಾ ಜಿಲ್ಲೆಯ ಮುರ್ವಾಲ್ ಗ್ರಾಮದಲ್ಲಿ ನಡೆದಿದೆ. ಯುವತಿಯನ್ನು ಪೊಲೀಸರು ಬಂಧಿಸಿದ್ದಾರೆ. ಸುಖರಾಜ್ ಪ್ರಜಾಪತಿ (50) ಎಂಬಾತ ಯುವತಿಯ ಅತ್ಯಾಚಾರಕ್ಕೆ ಯತ್ನಿಸಿದ್ದ. ಆತನಿಂದ ರಕ್ಷಣೆ ಪಡೆಯಲು ಹರಿತವಾದ ಆಯುಧದಿಂದ ಯುವತಿ ದಾಳಿ ಮಾಡಿದ್ದಳು.

ಆತನ ತಲೆಗೆ ಗಂಭೀರವಾಗಿ ಗಾಯವಾಗಿ, ಸ್ಥಳದಲ್ಲೇ ಸಾವಿಗೀಡಾಗಿದ್ದ. ಆತನ ಶವವನ್ನು ವಶಕ್ಕೆ ಪಡೆಯಲಾಗಿದೆ ಎಂದು ಸ್ಟೇಷನ್ ಹೌಸ್ ಆಫೀಸರ್ (ಎಸ್‌ಹೆಚ್‌ಒ) ರಾಜೇಂದ್ರ ಸಿಂಗ್ ರಾಜಾವತ್ ತಿಳಿಸಿದ್ದಾರೆ ಸುಖರಾಜ್ ಪ್ರಜಾಪತಿ ಕುಟುಂಬದ ಸದಸ್ಯರು ನೀಡಿದ ದೂರಿನ ಆಧಾರದ ಮೇಲೆ, ಪೊಲೀಸರು ಕೊಲೆ ಪ್ರಕರಣವನ್ನು ದಾಖಲಿಸಿಕೊಂಡು ಯುವತಿಯನ್ನು ಬಂಧಿಸಲಾಗಿದೆ. ಹಲ್ಲೆಗೆ ಬಳಸಿದ ಆಯುಧವನ್ನು ವಶಕ್ಕೆ ಪಡೆಯಲಾಗಿದೆ. ವಿಚಾರಣೆಯ ಸಮಯದಲ್ಲಿ, ಆ ವ್ಯಕ್ತಿ ತನ್ನ ಮನೆಗೆ ನುಗ್ಗಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಲು ಯತ್ನಿಸಿದ್ದ. ತನ್ನನ್ನು ತಾನು ರಕ್ಷಿಸಿಕೊಳ್ಳುವ ಪ್ರಯತ್ನದಲ್ಲಿ, ಮನೆಯಲ್ಲಿ ಇರಿಸಲಾಗಿದ್ದ 'ಫರ್ಸಾ'ದಿಂದ ಆತನಿಗೆ ಹೊಡೆದೆ.

ಇದರಿಂದಾಗಿ ಆತ ಸಾವನ್ನಪ್ಪಿದ್ದಾನೆ ಎಂದು ಮಹಿಳೆ ಹೇಳಿದ್ದಾಳೆ

# ದಾಖಲೆ ಮದ್ಯ ಮಾರಾಟ: ಹೊಸ ವರ್ಷದಲ್ಲಿ ಕರ್ನಾಟಕವನ್ನೇ ಹಿಂದಿಕ್ಕಿದ ಈ ರಾಜ್ಯ

**ನವದೆಹಲಿ:** ಹೊಸ ವರ್ಷದ ಸಂಭ್ರಮ ದೇಶಾದ್ಯಂತ ಭರ್ಜರಿಯಾಗಿ ನಡೆದಿದೆ. ಡಿಸೆಂಬರ್ ಅಂತ್ಯ ಮತ್ತು ಜನವರಿ ಆರಂಭದಲ್ಲಿ ಜನರು ಪಾರ್ಟಿ, ಸಂಭ್ರಮ, ಸ್ನೇಹಿತ ರೊಂದಿಗಿನ ಆಚರಣೆಗಳು ಎಲ್ಲೆಡೆ ಜೋರಾಗಿದ್ದವು. ಅದರ ಪರಿಣಾಮವಾಗಿ ಮದ್ಯ ಮಾರಾಟದಲ್ಲಿ ಅಪೂರ್ವ ದಾಖಲೆ ಬರೆದಿದೆ. ವಿಶೇಷವಾಗಿ ತೆಲಂಗಾಣ ರಾಜ್ಯದಲ್ಲಿ ಕಳೆದ ಮೂರು ದಿನಗಳಲ್ಲಿ ₹1000 ಕೋಟಿ ಮೌಲ್ಯದ ಮದ್ಯ ಮಾರಾಟವಾಗಿದ್ದು, ಇದು ರಾಜ್ಯದ ಇತಿಹಾಸದಲ್ಲೇ ಅಪರೂಪದ ದಾಖಲೆ ಎಂದು ಅಬಕಾರಿ ಇಲಾಖೆ ತಿಳಿಸಿದ ಅಬಕಾರಿ ಇಲಾಖೆಯ ಅಧಿಕೃತ ಅಂಕಿಅಂಶಗಳ ಪ್ರಕಾರ, ಡಿಸೆಂಬರ್ 29ರಿಂದ 31ರವರೆಗೆ ರಾಜ್ಯಾದ್ಯಂತ 8.30 ಲಕ್ಷ ಮದ್ಯದ ಪೆಟ್ಟಿಗೆಗಳು ಹಾಗೂ 7.78 ಲಕ್ಷ ಬಿಯರ್ ಪೆಟ್ಟಿಗೆ ಗಳು ಮಾರಾಟವಾಗಿವೆ. ಕೇವಲ ಮೂರು ದಿನಗಳಲ್ಲಿ ನಡೆದ ಈ ವ್ಯಾಪಕ ಮಾರಾಟದಿಂದ ಸರ್ಕಾರದ ಬೊಕ್ಕಸಕ್ಕೆ ಭಾರೀ ಆದಾಯ ಹರಿದು ಬಂದಿದೆ. ಆರು ದಿನಗಳ ಅವಧಿಯಲ್ಲಿ ಒಟ್ಟು ₹1,350 ಕೋಟಿ ಮೌಲ್ಯದ ಮದ್ಯವನ್ನು ಜನರು ಸೇವಿಸಿದ್ದಾರೆ.

ಕಳೆದ ವರ್ಷದೊಂದಿಗೆ ಹೋಲಿಸಿದರೆ ಈ ಬಾರಿ ಮದ್ಯ ಮಾರಾಟದಲ್ಲಿ ಗಣನೀಯ ಏರಿಕೆ ಕಂಡುಬಂದಿದೆ. ಡಿಸೆಂಬರ್ 31ರಂದು ₹736 ಕೋಟಿ ಮೌಲ್ಯದ ಮದ್ಯ ಮಾರಾಟ ದಾಖಲಾಗಿದ್ದರೆ, ಈ ಬಾರಿ ಅದನ್ನು ಮೀರಿ ಮಾರಾಟ ವಾಗಿದೆ. ವಿಶೇಷವಾಗಿ ಹೊಸ ವರ್ಷಾಚರಣೆಯ ದಿನ ವೈನ್ ಅಂಗಡಿಗಳ ಮುಂದೆ ಸಾಲು ಗಳು ಕಂಡುಬಂದಿದ್ದವು.

ಹಲವೆಡೆ ಮದ್ಯ ಮಾರಾಟ ಹಿಂದಿನ ವರ್ಷಕ್ಕಿಂತ ಹೆಚ್ಚಿವೆ ಎಂದು ಅಬಕಾರಿ ಇಲಾಖೆಯ ಮೂಲಗಳು ತಿಳಿಸಿವೆ. ಕೇವಲ ಡಿಸೆಂಬರ್ ತಿಂಗಳಲ್ಲೇ ತೆಲಂಗಾಣದಲ್ಲಿ 38.07 ಲಕ್ಷ ಮದ್ಯದ ಪೆಟ್ಟಿಗೆಗಳು ಮತ್ತು 45.09 ಲಕ್ಷ ಬಿಯರ್ ಪೆಟ್ಟಿಗೆಗಳು ಮಾರಾಟವಾಗಿದ್ದು, ಒಟ್ಟು ₹3,805 ಕೋಟಿ ಮೌಲ್ಯದ ವಹಿವಾಟು ನಡೆದಿದೆ. ಇದು ರಾಜ್ಯದ ಆರ್ಥಿಕತೆಗೆ ತಾತ್ಕಾಲಿಕವಾಗಿ ದೊಡ್ಡ ಉತ್ತೇಜನ ನೀಡಿದರೂ, ಸಮಾಜದ ಮೇಲೆ ಬೀರುವ ದುಷ್ಪ ರಿಣಾಮ ಬೀರಬಹುದು. ಇನ್ನೊಂದೆಡೆ, ಮದ್ಯ ಪಾನದ ಅತಿರೇಕದಿಂದ ರಸ್ತೆ ಸುರಕ್ಷತೆಗೂ ಸವಾಲು ಎದುರಾಗಿದೆ. ಹೊಸ ವರ್ಷದ ಸಂಭ್ರಮದ ಹಿನ್ನೆಲೆಯಲ್ಲಿ ಹೈದರಾಬಾದ್ ನಗರಾದ್ಯಂತ ಪೊಲೀಸರು ವಿಶೇಷ "ಡ್ರಂಕ್ ಅಂಡ್ ಡ್ರೈವ್" ಕಾರ್ಯಾಚರಣೆ ನಡೆಸಿದರು. ಮೂರು ಕಮಿಷನರೇಟ್ ವ್ಯಾಪ್ತಿಯಲ್ಲಿ ಒಟ್ಟು 2,731 ಕುಡಿದು ವಾಹನ ಚಾಲನೆ ಪ್ರಕರಣಗಳು ದಾಖಲಾಗಿವೆ. ಹೈ ದರಾ ಬಾದ್ ಕಮಿಷನರೇಟ್‌ನಲ್ಲಿ 1,198, ಸೈಬರಾಬಾದ್‌ನಲ್ಲಿ 928 ಮತ್ತು ರಾಚಕೊಂಡ ಕಮಿಷನರೇಟ್‌ನಲ್ಲಿ 605 ಪ್ರಕರಣಗಳು ದಾಖಲಾಗಿವೆ.

ಮಾದಕ ದ್ರವ್ಯ ಬಳಕೆಯನ್ನು ತಡೆಯುವ ಉದ್ದೇಶದಿಂದ, ಈಗಲ್ ಫೋರ್ಸ್, ಪೊಲೀಸ್ ಇಲಾಖೆ ಮತ್ತು ಅಬಕಾರಿ ಇಲಾಖೆ ಜಂಟಿಯಾಗಿ ವಿಶೇಷ ತಪಾಸಣೆ ನಡೆಸಿದವು. ಸುಮಾರು 15 ಈಗಲ್ ಫೋರ್ಸ್ ತಂಡಗಳು ಮತ್ತು ಎಂಟು ಅಬಕಾರಿ ತಂಡಗಳು ಪಬ್‌ಗಳು, ರೆಸಾರ್ಟ್‌ಗಳು ಹಾಗೂ ಪಾರ್ಟಿ ಸ್ಥಳಗಳಲ್ಲಿ ದಾಳಿ ನಡೆಸಿದವು. ಈ ವೇಳೆ ಹಲವೆಡೆ ನಿಯಮ ಉಲ್ಲಂಘನೆ ಪ್ರಕರಣಗಳು ಪತ್ತೆಯಾಗಿವೆ.

ನರಸಿಂಗಿಯ ಗೋಲ್ಡನ್ ಟೆಂಪಲ್ ಪ್ರದೇಶದಲ್ಲಿ ಎಸ್‌ಒಟಿ ಪೊಲೀಸರು ನಡೆಸಿದ ಶೋಧದ ವೇಳೆ, ಮಾದಕ ದ್ರವ್ಯ ಸೇವಿಸಿದ್ದ ವ್ಯಕ್ತಿಯೊಬ್ಬರನ್ನು ಏಳು ಗ್ರಾಂ ಕೊಕೇನ್ ನೊಂದಿಗೆ ಬಂಧಿಸಲಾಗಿದೆ. ಈ ಮಾದಕ ದ್ರವ್ಯವನ್ನು ಗೋವಾದಿಂದ ಹೈದರಾ ಬಾದ್‌ಗೆ ಸಾಗಿಸಲಾಗುತ್ತಿತ್ತು ಎಂಬ ಶಂಕೆ ವ್ಯಕ್ತವಾಗಿದೆ.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ
:9538786812
9880655344

# ಒತ್ತುವರಿ ಪ್ರಕರಣ: ಮುಸ್ಲಿಂ ಕುಟುಂಬಗಳೇ ಹೆಚ್ಚು, ಜಿಬಿಎ ಅಂತಿಮ ವರದಿ



**ಬೆಂಗಳೂರು:** ಕೋಗಿಲು ಲೇಔಟ್‌ನಲ್ಲಿ ಒತ್ತುವರಿ ತೆರವು ಸಂಬಂಧ ಮನೆ ಕಳೆದುಕೊಂಡವರಿಗೆ ಸರ್ಕಾರ ಫ್ಲಾಟ್ ನೀಡಲು ಮುಂದಾಗಿದೆ. ಈಗಾಗಲೇ ಲೇಔಟ್ ಗೆ ತೆರಳಿ ಮನೆ ಕಳೆದುಕೊಂಡವರ ಮಾಹಿತಿ ಸಂಗ್ರಹಿಸಲಾಗಿದ್ದು, ಕಂದಾಯ ಇಲಾಖೆ ಮತ್ತು ಉತ್ತರ ಪಾಲಿಕೆ ಇಲಾಖೆ ಅಧಿಕಾರಿಗಳೂ ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಅಂತಿಮ ವರದಿ ಸಲ್ಲಿಸಿದ್ದಾರೆ. ಕೋಗಿಲು ಲೇಔಟ್‌ನ ಒಟ್ಟು ಮೂರು ಕಾಲೋನಿಗಳಲ್ಲಿ ಮನೆ ತೆರವಿಯಿಂದ ಎಷ್ಟು ಜನ ನಿರಾಶ್ರಿತರಾಗಿದ್ದಾರೆ ಅನ್ನೋ ಕುರಿತು ವರದಿ ನೀಡಲಾಗಿದೆ.

ಜಿಬಿಎಗೆ ಸಲ್ಲಿಕೆಯಾಗಿರುವ ವರದಿಯಂತೆ, ಫಕೀರ್ ಕಾಲೋನಿಯ 40 ಮನೆ ತೆರವು ಮಾಡಲಾಗಿದ್ದು, 56 ಮಂದಿ ಮನೆಯ ಮುಖ್ಯಸ್ಥರಿದ್ದು, 96 ವಯಸ್ಕರಿದ್ದಾರೆ. 140 ಮಕ್ಕಳಿದ್ದು, ಒಟ್ಟು 292 ಜನರಿದ್ದಾರೆ. ಇನ್ನು ನ್ಯೂ ಫಕೀರ್ ಲೇಔಟ್‌ನಲ್ಲಿ ಒಟ್ಟು 45 ಮನೆ ತೆರವು ಮಾಡಲಾಗಿದ್ದು, 50 ಮಂದಿ ಮನೆಯ ಮುಖ್ಯಸ್ಥರಿದ್ದು, ವಯಸ್ಕರು 128, 116 ಮಕ್ಕಳಿದ್ದು, ಒಟ್ಟು 294 ಮಂದಿ ಇದ್ದಾರೆ. ಇನ್ನು ವಸೀಂ ಲೇಔಟ್‌ನಲ್ಲಿ, 82 ಮನೆ ತೆರವು ಮಾಡಲಾಗಿದ್ದು, ಮನೆ ಮುಖ್ಯಸ್ಥರು 82 ಜನರಿದ್ದಾರೆ. 201 ವಯಸ್ಕರು, 394 ಮಕ್ಕಳಿದ್ದು, ಒಟ್ಟು 394 ಜನರಿದ್ದಾರೆ. ಹೀಗೆ ಮೂರು ಕಾಲೋನಿಯ ಒಟ್ಟು ಒಂದು ಸಾವಿರ ಏಳು ಮಂದಿ ನಿರಾಶ್ರಿತರಾಗಿದ್ದಾರೆ. ಈ ಮೂರು ಲೇಔಟ್‌ಗಳಲ್ಲಿ 156 ಮುಸ್ಲಿಂ ಸಮುದಾಯದ ಕುಟುಂಬದವರಿದ್ದಾರೆ. 31 ಹಿಂದೂ ಕುಟುಂಬಗಳಿವೆ. ಒಂದು ಕುಟುಂಬ ಕ್ರಿಶ್ಚಿಯನ್ ಸಮುದಾಯಕ್ಕೆ ಸೇರಿದೆ.

ಸದ್ಯ ಈ ಕುರಿತು ಮತ್ತೊಂದು ಸುತ್ತಿನ ಪರಿಶೀಲನೆ ನಡೆಯಲಿದ್ದು, ಬಳಿಕ ಜಿಬಿಎ ಸರ್ಕಾರಕ್ಕೆ ವರದಿ ಸಲ್ಲಿಕೆ ಮಾಡಲಿದೆ. ಈ ಮಧ್ಯೆ ಇಂದು ಕೋಗಿಲು ಲೇಔಟ್‌ಗೆ ಬಿಜೆಪಿಯ ಸತ್ಯಶೋಧನಾ ಸಮಿತಿ ಭೇಟಿ ನೀಡುತ್ತಿದೆ. ರಾಜೀವ್ ಗಾಂಧಿ ವಸತಿ ಯೋಜನೆ ಅಡಿ ಅರ್ಜಿ ಸಲ್ಲಿಸಿ, ಮನೆ ಸಿಗದೇ ರೋಸಿ ಹೋಗಿದ್ದವರು ಈಗಾಗಲೇ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿದ್ದಾರೆ. ಅವರು ಶನಿವಾರ ಕೂಡಾ ರಾಜೀವ್ ಗಾಂಧಿ ವಸತಿ ಕಚೇರಿಗೆ ಬಂದಿದ್ದು, ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಏತನ್ಮಧ್ಯೆ, ಕನ್ನಡ ಸಂಘಟನೆಗಳು ಒತ್ತುವರಿದಾರರಿಗೆ ಮನೆ ಹಂಚಿಕೆ ಮಾಡುವುದಕ್ಕೆ ವಿರೋಧ ವ್ಯಕ್ತಪಡಿಸಿವೆ. ಈ ಸಂಬಂಧ ರಾಜ್ಯಪಾಲರನ್ನು ಭೇಟಿಯಾಗಿ ಮನವಿಯನ್ನೂ ಸಲ್ಲಿಸಿವೆ. ಸರ್ಕಾರ ನಿರ್ಧಾರ ಬದಲಿಸದಿದ್ದರೆ ಹೋರಾಟದ ಎಚ್ಚರಿಕೆ ನೀಡಿವೆ. ಈ ಮಧ್ಯೆ ಶಾಸಕ ಎಸ್.ಟಿ. ಸೋಮಶೇಖರ್ ಸಹ ವಸತಿ ಸಚಿವ ಜಮೀರ್ ಅಹ್ಮದ್ ವಿರುದ್ಧ ಅಸಮಾಧಾನ ಹೊರಹಾಕಿದ್ದು, ಒಬ್ಬರಿಗೊಂದು ನ್ಯಾಯ, ಮತ್ತೊಬ್ಬರಿಗೊಂದ ನ್ಯಾಯ ಕೊಡಬೇಡಿ ಎಂದಿದ್ದಾರೆ. ಇನ್ನು ಕೋಗಿಲು ಲೇಔಟ್ ಕಂದಾಯ ಸಚಿವ ಕೃಷ್ಣ ಭೈರೇಗೌಡ ಪ್ರತಿನಿಧಿಸುವ ಬ್ಯಾಟರಾಯನಪುರ ಕ್ಷೇತ್ರ ವ್ಯಾಪ್ತಿಯಲ್ಲಿ ಬರುತ್ತದೆ. ಅಕ್ರಮ ಮನೆಗಳ ತೆರವು ಪ್ರಕರಣ ಇಷ್ಟೊಂದು ಗಂಭೀರ ಸ್ವರೂಪ ಪಡೆದಿದ್ದರೂ, ಕಂದಾಯ ಸಚಿವರು ಮಾತ್ರ ಎಲ್ಲೂ ಕಾಣಿಸಿಕೊಳ್ಳುತ್ತಿಲ್ಲ. ಹೀಗೆಂದು ಬ್ಯಾಟರಾಯನಪುರ ಕ್ಷೇತ್ರದಲ್ಲಿ ಬಿಜೆಪಿ ಕಾರ್ಯಕರ್ತರು 'ಸಚಿವ ಕೃಷ್ಣ ಭೈರೇಗೌಡ ಕಾಣೆಯಾಗಿದ್ದಾರೆ' ಎಂದು ಪೋಸ್ಟರ್ ಅಭಿಯಾನ ನಡೆಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.